ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 205

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 24-07-2026

## ಡಿಸೆಂಬರ್ ವೇಳೆಗೆ ಸೆಮಿಕಂಡಕ್ಟರ್ ಪಾರ್ಕ್ : ಸಚಿವ ಎಂ.ಬಿ.ಪಾಟೀಲ್

**ಬೆಂಗಳೂರು, ಜು.23–** ಪ್ರಸಕ್ತ ವಾಸದ ಡಿಸೆಂಬರ್ ವೇಳೆಗೆ ಕ್ವಿನ್ ಸಿಟಿ ಹಂತ–1ರಲ್ಲಿ 200 ಎಕರೆ ವಿಸ್ತಾರದ ಸೆಮಿಕಂಡಕ್ಟರ್ ಪಾರ್ಕ್ ಕಾರ್ಯಾಚರಣೆ ಆರಂಭಿಸಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ. ಬೆಂಗಳೂರು ಅಂತಾರಾಷ್ಟ್ರಿಯ ಪ್ರದರ್ಶನ ಕೇಂದ್ರದಲ್ಲಿ ಆರಂಭವಾದ 15ನೇ ವರ್ಷದ ವ್ಯೂಹಾತಕ ವಿದ್ಯುನಾನ ಸಮಾವೇಶ (ಸ್ಟ್ರಾಟೆಜಿಕ್ ಎಲೆಕ್ಟ್ರಾನಿಕ್ಸ್ ಸಮಿಟ್(2026)ನಲ್ಲಿ ಅವರು ಮಾತನಾಡಿದರು.




ರಾಜ್ಯವು ಎರಡು ವರ್ಷಗಳ ಹಿಂದೆಯೇ ಸೆಮಿಕಂಡಕ್ಟರ್ ಮತ್ತು ಆಧುನಿಕ ಇ.ಎಸ್.ಡಿ.ಎಂ. ವಲಯಗಳಲ್ಲಿ 23 ಸಾವಿರ ಕೋಟಿ ರೂ. ಹೂಡಿಕೆಗೆ ಅನುಮೋದನೆ ನೀಡಿದೆ. ಇದರಿಂದ ಹೆಚ್ಚಿನ ಕೌಶಲ್ಯ ಬೇಡುವ 3,500ಕ್ಕೂ ಹೆಚ್ಚು ಎಂಜಿನಿಯರಿಂಗ್ ಹುದ್ದೆಗಳು ಸೃಷ್ಟಿಯಾಗಲಿವೆ ಎಂದರು. ಅಪ್ಲೈಡ್ ಮೆಟೀರಿಯಲ್ಸ್ ಇಂಡಿಯಾ ಸಂಸ್ಥೆಯು 4,851 ಕೋಟಿ ರೂ., ಲ್ಯಾಮ್ ರೀಸರ್ಚ್ ಸಂಸ್ಥೆಯು 15,901 ಕೋಟಿ ರೂ., ಮತ್ತು ಭಾರತ್ ಸೆಮಿ ಸಿಸ್ಟಮ್ಸ್ ಕಂಪನಿಯು 2,342 ಕೋಟಿ ರೂ. ಬಂಡವಾಳ ಹೂಡುತ್ತಿವೆ. ಇದಕ್ಕೆ ಪೂರಕವಾಗಿ ಕರ್ನಾಟಕದಲ್ಲಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಜಾಗತಿಕ ಪೂರೈಕೆ ಸರಪಳಿಯೊಂದಿಗೆ ಬೆಸೆಯಲಾಗುವುದು ಎಂದರು.

ರಾಜ್ಯದಲ್ಲಿ ಸದ್ಯದಲ್ಲೇ ಜಾರಿಗೆ ಬರಲಿರುವ 2026–2031ರ ನೂತನ ವೈಮಾಂತರಿಕ್ಷ ಮತ್ತು ರಕ್ಷಣಾ ನೀತಿಯಲ್ಲಿ ಆಧುನಿಕ ಎಲೆಕ್ಟ್ರಾನಿಕ್ ಸಮರ ಸಾಧನಗಳು, ಎಂಬೆಡೆಡ್ ತಂತ್ರಾಂಶ, ಇ-ವಿಟಾಲ್ ಸಾಧನಗಳು, ಬಾಹ್ಯಾಕಾಶ ಕ್ಷೇತ್ರದಲ್ಲಿ ಬಳಸಲಾಗುವ ಪೇಲೋಡ್ ಇವುಗಳನ್ನು ಗಮನದಲ್ಲಿ ಇಟ್ಟುಕೊಂಡು ಸಮಗ್ರ ಕ್ಲಸ್ಟರ್‌ಗಳನ್ನು ಅಭಿವೃದ್ಧಿ ಪಡಿಸಲು ಒತ್ತು ಕೊಡಲಾಗಿದೆ ಎಂದು ತಿಳಿಸಿದರು. ರಾಜ್ಯದಲ್ಲಿ ಕೇವಲ ತಯಾರಿಕೆ ಆದರೆ ಮಾತ್ರ ಸಾಲದು. ಕಂಪನಿಗಳು ಇಲ್ಲೇ ವಿನ್ಯಾಸ, ಅಭಿವೃದ್ಧಿ, ಮೂಲ ಮಾದರಿಗಳು (ಪ್ರೊಟೋಟೈಪ್), ಪರೀಕ್ಷೆ, ಪ್ರಮಾಣೀಕರಣ, ರಫ್ತು ವಹಿವಾಟು ಎಲ್ಲವೂ ನಡೆಸುವಂತಾಗಬೇಕು. ರಾಜ್ಯ ಸರಕಾರವು ಈ ವಿಚಾರದಲ್ಲಿ ಉದ್ಯಮಿಗಳ ಜತೆ ಕೈಗೂಡಿಸಲು ಸಿದ್ಧವಿದೆ. ಆದ್ದರಿಂದ ಸೆಮಿಕಂಡಕ್ಟರ್ ಮಿಷನ್ 2.0 ಯನ್ನು ಕರ್ನಾಟಕದ ಮೂಲಕ ನನಸು ಮಾಡಬೇಕು ಎಂದು ಅವರು ಕರೆ ಕೊಟ್ಟಿದ್ದಾರೆ.

ರಾಜ್ಯವು ಸಂಶೋಧನೆ, ಡೀಪ್–ಟೆಕ್ ವಿನ್ಯಾಸ ಮತ್ತು ಎಕ್ವಿಪೆಂಟ್ ಎಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಅಗ್ರಸ್ಥಾನದಲ್ಲಿದೆ. ಇನ್ನೊಂದೆಡೆಯಲ್ಲಿ ಜಿಸಿಸಿ ಹಾಗೂ ಸಂಶೋಧನೆ ಮತ್ತು ಅಭಿವೃದ್ಧಿ ಕೇಂದ್ರಗಳಲ್ಲೂ ನಾವು ಮುಂಚೂಣಿಯಲ್ಲಿದ್ದೇವೆ. ಇದರಾಚೆಗೆ, ಬೆಂಗಳೂರಿನಲ್ಲಿ 100ಕ್ಕೂ ಹೆಚ್ಚು ಚಿಪ್ ವಿನ್ಯಾಸ ಸಂಸ್ಥೆಗಳು ಮತ್ತು 3 ನ್ಯಾನೋಮೀಟರ್ ವಿನ್ಯಾಸ ಕೇಂದ್ರಗಳು ಸಕ್ರಿಯವಾಗಿವೆ. ಉದ್ಯಮಿಗಳು ಇವೆಲ್ಲವನ್ನೂ ಸಕಾರಾತಕವಾಗಿ ಪರಿಗಣಿಸಿ, ಹೂಡಿಕೆಗೆ ಮುಂದಾಗಬೇಕು ಎಂದು ಪಾಟೀಲ ವಿವರಿಸಿದ್ದಾರೆ.

ಇದೇ ಸಂದರ್ಭದಲ್ಲಿ ಸಚಿವ ಪಾಟೀಲ ಅವರು ಎಲ್ಸಿನಾ ವರದಿ–26 ವರದಿಯನ್ನು ಬಿಡುಗಡೆ ಮಾಡಿದರು.ಕರ್ನಲ್ ಲಾಕ್ಯಾಜೀತ್ ಸಿಂಗ್ ಚೌಹಾಣ್ ಅವರು ಭವಿಷ್ಯದ ಡ್ರೋನ್ ಮತ್ತು ತಂತ್ರಜ್ಞಾನ ಕುರಿತು ಬರೆದಿರುವ ವಿಂಗ್ ಆಫ್ ಅಸ್ತ್ರ ಪುಸ್ತಕವನ್ನೂ ಸಚಿವರು ಬಿಡುಗಡೆ ಮಾಡಿದರು.

ಟೆಲಿಮ್ಯಾಟಿಕ್ಸ್ ಅಭಿವೃದ್ಧಿ ಕೇಂದ್ರದ (ಸಿ–ಡಾಟ್) ಸಿಇಒ ಡಾ.ರಾಜಕುಮಾರ್ ಉಪಾಧ್ಯಾಯ, ಬಿಇಎಲ್ ಸಿಇಒ ಮನೋಜ್ ಜೈನ್, ಕೇಂದ್ರ ಸರಕಾರದ ಜಂಟಿ ಕಾರ್ಯದರ್ಶಿ ಸುಶೀಲ್ ಪಾಲ್, ಡಿ.ಆರ್.ಡಿ.ಓ ಮಹಾನಿರ್ದೇಶಕ ಡಾ.ಬಿ ಕೆ ದಾಸ್, ಲೆ.ಜ. ರಾಜೀವ್ ಸಾಹ್ನಿ ಅವರು ಪ್ರಸಕ್ತ ವಿದ್ಯಮಾನಗಳ ಬಗ್ಗೆ ಮಾತನಾಡಿದರು.ಎಲ್ಸಿನಾ ಸಂಘಟನೆಯ ಅಧ್ಯಕ್ಷ ಡಾ.ಶಶಿಕುಮಾರ್ ಜೆನ್ನಾದಮ್ ಉಪಸ್ಥಿತರಿದ್ದರು.

## ಮತದಾರರ ವಿವರಗಳ ಪರಿಶೀಲನೆಗೆ ಸಹಕರಿಸಿ: ಡಾ. ಹಫೀಜ್ ಅಲ್ ಹುಸೈನಿ



**ಕಲಬುರಗಿ:** ಇಲ್ಲಿನ ಸುಪ್ರಸಿದ್ಧ ದರ್ಗಾ ಹಜರತ್ ಖ್ವಾಜಾ ಬಂದೇನವಾಜ್ (ರ.ಹ.) ಅವರ ಸಜ್ಜಾದಾ ನಶೀನ್ ಹಾಗೂ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ ಹಜರತ್ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸೈನಿ ಅವರು, ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯಕ್ರಮದ ಅಂಗವಾಗಿ ಮತದಾರರ ಗಣತಿ ನಮೂನೆಯನ್ನು ಭರ್ತಿ ಮಾಡಿ ಬಿಎಲ್‌ಓ ಅವರಿಗೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರು ತಮ್ಮ ಮತದಾರರ ಅರ್ಜಿ ನಮೊನೆಯನ್ನು ಸರಿಯಾಗಿ ಭರ್ತಿ ಮಾಡಿ ಶೀಘ್ರವಾಗಿ ತಮ್ಮ ವ್ಯಾಪ್ತಿಯ ಬಿಎಲ್‌ಓ ಗಳಿಗೆ ಸಲ್ಲಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿಎಲ್‌ಓ (ಪಿ–151) ಅಫ್ಜಲ್ ರಶೀದ್, ನೋಡಲ್ ಅಧಿಕಾರಿ ಶರಣಕುಮಾರ ತೆಂಗ್ಲಿ ಹಾಗೂ ಬಿಎಲ್‌ಓ ಮೇಲ್ವಿಚಾರಕಿ ಶ್ರೀಮತಿ ಅಶ್ವಿನಿ ಕುಲಕರ್ಣಿ ಅವರು, ಭರ್ತಿ ಮಾಡಿದ ನಮೂನೆಯನ್ನು ಪರಿಶೀಲಿಸಿ ಸ್ವೀಕೃತಿಯ ಪ್ರಕ್ರಿಯೆ ಪೂರ್ಣಗೊಳಿಸಿದರು. ಕಲಬುರಗಿ ಮಹಾನಗರ ಪಾಲಿಕೆಯ ಸದಸ್ಯ ಜನಾಬ್ ಖುಸ್ರೋ ಜಗೀರ್‌ದಾರ್ ಅವರು ಸಹ ಉಪಸ್ಥಿತರಿದ್ದರು.

ಈ ಕುರಿತು ಮಾತನಾಡಿದ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸೈನಿ ಅವರು, ಕಲಬುರಗಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ನಾಗರಿಕರು ತಮ್ಮ ಎಸ್‌ಐಆರ್ ಅರ್ಜಿ ನಮೂನೆಗಳನ್ನು ಶೀಘ್ರವಾಗಿ ಭರ್ತಿ ಮಾಡಿ ಸಲ್ಲಿಸುವಂತೆ ಮನವಿ ಮಾಡಿದರು. ಪ್ರಕ್ರಿಯೆ ಪೂರ್ಣಗೊಳ್ಳಲು ಇನ್ನು ಕೆಲವೇ ದಿನಗಳು ಬಾಕಿ ಇರುವುದರಿಂದ ಕೊನೆಯ ಕ್ಷಣದವರೆಗೆ ಕಾಯದೇ ಅಗತ್ಯ ಮಾಹಿತಿಗಳನ್ನು ಮೊದಿಸಿ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸುವಂತೆ ಅವರು ಕರೆ ನೀಡಿದರು. 2ನೇಪುಟಕ್ಕೆ

## ಜು.29ರಂದು ಮಾನ್ವಿ ನಾಗರಿಕರ ಹಿತ ರಕ್ಷಣಾ ವೇದಿಕೆ ನೇತೃತ್ವದಲ್ಲಿ ಮಾನ್ವಿ ಬಂದ್: ಎನ್.ತಿಪ್ಪಣ್ಣ ಬಾಗಲವಾಡ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾನ್ವಿ ನಾಗರಿಕರ ಹಿತ ರಕ್ಷಣಾ ವೇದಿಕೆ ಸಂಚಾಲಕರಾದ ಎನ್.ತಿಪ್ಪಣ್ಣ ಬಾಗಲವಾಡ ವಕೀಲರು ಮಾತನಾಡಿ ಸರಕಾರದಿಂದ ಈ ಭಾಗದ ಅಭಿವೃದ್ಧಿಗಾಗಿ ಸಾರ್ವಜನಿಕರ ಸುಗಮವಾದ ಸಂಚಾರಕ್ಕಾಗಿ ಜಿಲ್ಲೇಯ ಕಲ್ಮಲದಿಂದ ಸಿಂಧನೂರು ವರೆಗೆ ಕೆ.ಆರ್.ಡಿ.ಸಿ.ಎಲ್ ಇಲಾಖೆ ವತಿಯಿಂದ ಅಂದಾಜು 17ನೂರು ಕೋಟಿ ವೆಚ್ಚದಲ್ಲಿ ಚತುಷ್ಪಥ ರಾಜ್ಯ ಹೆದ್ದಾರಿ ರಸ್ತೆ ನಿರ್ಮಾಣ ಕಾಮಗಾರಿಯನ್ನು ಕೈಗೊಂಡಿದೆ ಅದ್ದರೆ ಕಾಮಗಾರಿಯನ್ನು ಪಡೆದಿರುವ ಗುತ್ತಿಗೆದಾರರು ರಸ್ತೆಯ ನಿರ್ಮಾಣವನ್ನು ಕೆ.ಆರ್.ಡಿ.ಸಿ.ಎಲ್ ಇಲಾಖೆಯ ಡಿಪಿಆರ್ ನಿಯಮದಂತೆ ನಿರ್ಮಾಣ ಮಾಡದೆ ಅತ್ಯಂತ ಅವೈಜ್ಞಾನಿಕವಾಗಿ ಕಳಪೆಯಾಗಿ ನಿವಾರ್ಣ ಮಾಡುತ್ತಿರುವುದರಿಂದ ಸಾರ್ವಜನಿಕರ ತೆರಿಗೆ ಹಣ ಪೋಲಾಗುವುದಲ್ಲದೆ ಮಾನ್ವಿ ಪಟ್ಟಣದ ಜನರಿಗೆ ಸಾಕಷ್ಟು ತೊಂದರೆ ಉಂಟಾಗುತ್ತಿದೆ. ರಸ್ತೆ ಮಧ್ಯದಿಂದ ಎರಡು ಕಡೆ 15 ಮೀಟರ್ ರಸ್ತೆ ನಿರ್ಮಾಣ ಮಾಡಿಲ್ಲದೆ ಇರುವುದರಿಂದ ರಸ್ತೆಗಳು ಸಣ್ಣದಾಗಿದೆ ಜೊತೆಗೆ ಪಟ್ಟಣದ ವಿವಿಧ ಭಾಗಗಳಿಗೆ ಸಂಚರಿಸುವುದಕ್ಕೆ ಅನುಕೂಲವಾಗುವಂತೆ ಸರ್ವಿಸ್ ರಸ್ತೆ ನಿರ್ಮಾಣ ಮಾಡದೆ ಇರುವುದರಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿವೆ. ರಸ್ತೆಯ ಎರಡು ಬದಿಗಳಲ್ಲಿ ಮಳೆ ನೀರು ಹರಿದು ಹೋಗುವುದಕ್ಕೆ ನಿರ್ಮಾಣ ಮಾಡಿರುವ ಚರಂಡಿಗಳು ಅತ್ಯಂತ ಚಿಕ್ಕದಾಗಿದು ನೀರು ಸರಗವಾಗಿ ಹರಿದು ಹೋಗುವುದಕ್ಕೆ ಸಾಧ್ಯವಾಗುವುದಿಲ್ಲ ಹಾಗೂ ರಾಜಾ ಕಾಲೂವೆಗಳಿಗೆ ಸಂಪರ್ಕ ನೀಡದೆ ಇರುವುದರಿಂದ ಮುಂದಿನ 2ನೇಪುಟಕ್ಕೆ

## ಫಸಲ್ ಬಿಮಾ ಯೋಜನೆ ಅಡಿಯಲ್ಲಿ ನಿಖರ ಜಿಪಿಎಸ್ (GPS) ಫೋಟೋ ಕಡ್ಡಾಯ: ರೈತರಿಗೆ ಸೂಕ್ತ ಪರಿಹಾರ ತಲುಪಿಸಲು ಎಂ.ಡಿ. ಹುಸೇನ್ ಆಗ್ರಹ

ಧೈರ್ಯದ ದಾರಿ



**ಸಿರವಾರ:**ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ರೈತರು ತಮ್ಮ ಹೊಲಗಳಲ್ಲಿ ಬೆಳೆದಿರುವ ಬೆಳೆಯ ಬಗ್ಗೆ ಕಂದಾಯ ಇಲಾಖೆ ಹಾಗೂ ಕೃಷಿ ಇಲಾಖೆ ಅಧಿಕಾರಿಗಳು ನೇರವಾಗಿ ಜಮೀನಿಗೆ ಭೇಟಿ ನೀಡಿ ನಿಖರವಾದ ಜಿಪಿಎಸ್ (GPS) ಫೋಟೋಗಳನ್ನು ಕಡ್ಡಾಯವಾಗಿ ಅಪ್‌ಲೋಡ್ ಮಾಡಬೇಕು ಎಂದು ಮುಖಂಡರಾದ ಎಂ.ಡಿ. ಹುಸೇನ್ ಒತ್ತಾಯಿಸಿದ್ದಾರೆ.

ಯೋಜನೆಯಡಿ ವಿಮಾ ಪರಿಹಾರ ಪಾವತಿಸುವ ಸಂದರ್ಭದಲ್ಲಿ ರೈತರಿಗೆ ಯಾವುದೇ ರೀತಿಯ ತೊಂದರೆ ಉಂಟಾಗದಂತೆ ಎಚ್ಚರಿಕೆ ವಹಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಜಿಪಿಎಸ್ ಫೋಟೋಗಳು ಸರಿಯಾಗಿ ಅಪ್‌ಲೋಡ್ ಆಗದಿದ್ದರೆ, ರೈತರು ತೀವ್ರ ಗೊಂದಲ ಹಾಗೂ ಆತಂಕಕ್ಕೆ ಒಳಗಾಗಬೇಕಾಗುತ್ತದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಬೆಳೆ ವಿಮಾ ಹಣವನ್ನು ವಿತರಿಸುವ ವೇಳೆ ರೈತರು ಬೆಳೆದಿರುವ ನೈಜ ಬೆಳೆಯ ಫೋಟೋಗಳು ಲಭ್ಯವಿಲ್ಲದಿದ್ದರೆ ಅರ್ಹ ರೈತರಿಗೆ ಅನ್ಯಾಯವಾಗುವ ಸಾಧ್ಯತೆಯಿರುತ್ತದೆ. ಆದ್ದರಿಂದ, ಪ್ರತಿಯೊಬ್ಬ ರೈತರು ಬೆಳೆದಿರುವ ಬೆಳೆಗೆ ತಕ್ಕಂತೆ ಸೂಕ್ತವಾದ ವಿಮಾ ಪರಿಹಾರದ ಹಣ ನೇರವಾಗಿ ರೈತರಿಗೆ ತಲುಪುವಂತೆ ಅಧಿಕಾರಿಗಳು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂಬುದು ನಮ್ಮ ಮುಖ್ಯ ಉದ್ದೇಶವಾಗಿದೆ ಎಂದು ರೈತ ಮುಖಂಡರು ಎಂ.ಡಿ. ಹುಸೇನ್ ತಿಳಿಸಿದ್ದಾರೆ.

## ವಿಕಸಿತ್ ಭಾರತ ಜಿ ರಾಮ್ ಜಿ 125 ದಿನಗಳ ಉದ್ಯೋಗದ ಖಾತ್ರಿ

## ಗ್ರಾಮೀಣಾವೃದ್ಧಿಯ ಹೊಸ ಸಂಕಲ್ಪ, ಉದ್ಯೋಗದ ಹೊಸ ಖಾತ್ರಿ: ಸಿಇಒ ಈಶ್ವರ್

ಧೈರ್ಯದ ದಾರಿ



**ರಾಯಚೂರು ಜುಲೈ 23:** ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯ ಹಾಗೂ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ನಿರ್ದೇಶನದಂತೆ ವಿಕಸಿತ ಭಾರತ ಜಿ ರಾಮ್ ಜಿ125 ದಿನಗಳ ಗ್ರಾಮೀಣ ಉದ್ಯೋಗದ ಖಾತ್ರಿ ಹೊಸ ಖಾತ್ರಿ ಯೋಜನೆಯಡಿ ಗ್ರಾಮೀಣ ಪ್ರದೇಶದ ಜನರಿಗೆ ನಿರಂತರ ಕೆಲಸ ಒದಗಿಸಿ ವಲಸೆ ತಡೆಯುವ ಮತ್ತು ಉದ್ಯೋಗ ಖಾತರಿಯನ್ನು ಹೆಚ್ಚಿಸುವ ಮೂಲಕ ಗ್ರಾಮೀಣ ಕುಟುಂಬಗಳಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ವಿಕಸಿತ ಗ್ರಾಮ ಪಂಚಾಯತಿಯಿಂದ ವಿಕಸಿತ ಭಾರತದೆಡೆಗೆ ವಿಶೇಷ ಐಇಸಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ತಿಳಿಸಿದರು.

ರಾಯಚೂರು ಜಿಲ್ಲೆಯಲ್ಲಿ ತಲೆದೋರಿರುವ ಬರದಿಂದ ಗ್ರಾಮೀಣ ಪ್ರದೇಶದ ಅನೇಕ ಕುಟುಂಬಗಳಿಗೆ ಜೀವನ ನಿರ್ವಹಣೆಗಾಗಿ ವಿಕಸಿತ ಭಾರತ ಜಿ ರಾಮ್ ಜಿ–125 ದಿನಗಳ ಗ್ರಾಮೀಣ ಉದ್ಯೋಗದ ಖಾತ್ರಿ ಹೊಸ ಖಾತ್ರಿ ಯೋಜನೆಯಡಿ ಸ್ಥಳೀಯವಾಗಿ ಅಕುಶಲ ಕೆಲಸ ಒದಗಿಸಲಾಗುತ್ತಿದೆ. ಆದರೂ ಕೆಲವೆಡೆ ಜನರು ಉದ್ಯೋಗ ಅರಸಿ ವಲಸೆ ಹೋಗುತ್ತಿರುವುದನ್ನು ತಡೆಯಲು ಹೆಚ್ಚಿನ ಜನರಿಗೆ ಸ್ಥಳೀಯವಾಗಿ ನಿರಂತರ ಕೆಲಸ ಒದಗಿಸು ವುದು ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶದ ಎಲ್ಲಾ ಜನರಿಗೆ ನಿರಂತರ ಉದ್ಯೋಗ ಒದಗಿಸಿ ಜೀವನ ಸಂಕಷ್ಟ ನೀಗಿಸುವ ಉದ್ದೇಶದಿಂದ ಜುಲೈ 01 ರಿಂದ ವಿಕಸಿತ ಗ್ರಾಮ ಪಂಚಾಯತಿಯಿಂದ ವಿಕಸಿತ ಭಾರತದೆಡೆಗೆ ಕಾರ್ಯಕ್ರಮಗಳನ್ನು ರಾಯಚೂರು ಜಿಲ್ಲಾ ಪಂಚಾಯತ್ ವಿನೂತನ ಐಇಸಿ ಚಟುವಟಿಕೆಗಳ ಮೂಲಕ ಅಭಿಯಾ ನವನ್ನು ಜಿಲ್ಲೆಯ 179 ಗ್ರಾಮ ಪಂಚಾಯತಿಗಳಲ್ಲಿ ಕೈಗೊಳ್ಳಲಾಗುತ್ತಿದೆ. ಯೋಜನೆಯಡಿ 125 ದಿನಗಳ ಖಾತರಿಪಡಿಸಿದ ಉದ್ಯೋಗ, ಗಂಡು ಮತ್ತು ಹೆಣ್ಣಿಗೆ ಸಮಾನ ಅವಕಾಶ–ಸಮಾನ ಕೂಲಿ ಪ್ರತಿ ದಿನಕ್ಕೆ 382ರೂ.ಗಳು, ಗ್ರಾಮ ಸಭೆಯ ಮೂಲಕ ವಿಕಸಿತ ಗ್ರಾಮ ಪಂಚಾಯತ್ ಯೋಜನೆ, ನಿರುದ್ಯೋಗ ಭತ್ಯೆಗಾಗಿ ಬಲಿಷ್ಠ ನಿಯಮಗಳು, ಸಕಾಲಿಕ ಕೂಲಿ ಪಾವತಿ ಮತ್ತು ವಿಳಂಬ ಪರಿಹಾರ, ಗ್ರಾಮ ಸಭೆಯಿಂದ ವಿಕಸಿತ ಗ್ರಾಮ ಪಂಚಾಯತ್ ಯೋಜನೆ, ವಿಕಸಿತ ಗ್ರಾಮ ಪಂಚಾಯತಿಯಿಂದ ವಿಕಸಿತ 2ನೇಪುಟಕ್ಕೆ




## ಅರ್ಹ ಮತದಾರರ ಹೆಸರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಸೇರಬೇಕು: ಸಹಾಯಕ ಕಾರ್ಯದರ್ಶಿ ಎ.ಎಸ್.ರಾಘವೇಂದ್ರ




ಧೈರ್ಯದ ದಾರಿ

**ರಾಯಚೂರು ಜುಲೈ 23:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ರಾಯಚೂರು ಜಿಲ್ಲೆಯ ಎನ್.ಆರ್.ಎಲ್.ಎಮ್ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುವ ಸಮುದಾಯ ಸಂಪನ್ಮೂಲ ವ್ಯಕ್ತಿಗಳಾದ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಸಖಿಯರಿಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಎಸ್.ಐ.ಆರ್ ಜಾಗೃತಿ ಕಾರ್ಯಕ್ರಮವನ್ನು ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಗುರುವಾರ ಜರುಗಿತು.

ಈ ವೇಳೆ ಜಿಲ್ಲಾ ಪಂಚಾಯತಿಯ ಸಹಾಯಕ ಕಾರ್ಯದರ್ಶಿ ರಾಘವೇಂದ್ರ ಕೆ., ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಮತದಾನ ಬಹಳ ಮಹತ್ವದ್ದು, ಅರ್ಹ ಮತದಾರರ ಹೆಸರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಸೇರಬೇಕು. ಭಾರತ ಚುನಾವಣೆ ನಿರ್ದೇಶನದಂತೆ ಜಿಲ್ಲೆಯಲ್ಲಿ ಎಸ್.ಐ.ಆರ್ ನಡೆಯುತ್ತಿದ್ದು, ಅರ್ಹ ಮತದಾರರ ಪಟ್ಟಿಯನ್ನು ತಯಾರಿಸುವುದೇ ಇದರ ಪ್ರಮುಖ ಉದ್ದೇಶವಾಗಿದೆ. ಜೂನ್ 30 ರಿಂದ ಆಗಸ್ಟ್ 8ರವರೆಗೆ ಈ ಪ್ರಕ್ರಿಯೆ ನಡಿಯುತ್ತದೆ. ಕಾರಣ ಎಲ್ಲಾರೂ ಎಸ್.ಐ. ಆರ್ ಕಾರ್ಯಕ್ಕೆ ಕೈಜೊಡಿಸಿ ಯಶಸ್ವಿಗೊಳಿಸಲು ಕರೆ ನೀಡಿದರು. ಈ ವೇಳೆ ಜಿಲ್ಲಾ ಪಂಚಾಯತಿ ಆಡಳಿತ ವಿಭಾಗದ ಸಹಾಯಕ ನಿರ್ದೇಶಕಿ ಮಹೇಶ್ವರಿ ಅವರು ಮಾತನಾಡಿ, 2ನೇಪುಟಕ್ಕೆ

ಮೊದಲನೇ ಪುಟದಿಂದ

## ಜು.29ರಂದು ಮಾನ್ವಿ ನಾಗರಿಕರ ಹಿತ ರಕ್ಷಣಾ ವೇದಿಕೆ ನೇತೃತ್ವದಲ್ಲಿ ಮಾನ್ವಿ ಬಂದ್: ಎನ್.ತಿಪ್ಪಣ್ಣ ಬಾಗಲವಾಡ

ದಿನಗಳಲ್ಲಿ ಮಳೆಗಾಲದಲ್ಲಿ ಚರಂಡಿ ನೀರು ರಸ್ತೆ ಬದಿಯ ಬಡವಾಣೆಗಳ ಮನೆಗಳಿಗೆ ನುಗ್ಗುತ್ತದೆ. ಪಟ್ಟಣದ ರಾಯಚೂರು ರಸ್ತೆಯ ಲಕ್ಷ್ಮೀ ದೇವಸ್ಥಾನವನ್ನು ಉಳಿಸುವುದಕ್ಕೆ ಹೋಗಿ ರಸ್ತೆ ತಿರುವಿನಲ್ಲಿ ರಸ್ತೆ ವಿಸ್ತೀರ್ಣವನ್ನು ತಗ್ಗಿಸಿರುವುದರಿಂದ ಹಾಗೂ ಪದಾಚಾರಿಗಳು ರಸ್ತೆಯನ್ನು ದಾಟುವುದಕ್ಕೆ ಮೇಲ್ ಸೇತುವೆಗಳನ್ನು ನಿರ್ಮಾಣ ಮಾಡದೆ ಇರುವುದರಿಂದ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚು ರಸ್ತೆಯ ಎರಡು ಕಡೆ ರಸ್ತೆ ಅಗಲಿಕರಣ ಮಾಡಿ ರಸ್ತೆಯನ್ನು ನಿಯಮದಂತೆ ನಿರ್ಮಾಣ ಮಾಡದೆ ಮನಸ್ಸಿಗೆ ಬಂದಂತೆ ನಿರ್ಮಾಣ ಮಾಡಲಾಗುತ್ತಿದ್ದಾರು ಕೂಡ ಕೆ.ಆರ್.ಡಿ.ಸಿ.ಎಲ್ ಇಲಾಖೆ ಅಧಿಕಾರಿಗಳು ಯಾವುದೆ ಪರಿಶೀಲನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ ಹಾಗೂ ಪಟ್ಟಣದ ಪ್ರವೇಶದಲ್ಲಿ ಬರುವ ಮೇಜರ್ ಶಾಹನವಾಜ್ ಖಾನ್ ವೃತ್ತ, ಡಾ.ಬಾಬು ಜಗಜೀವನ್ ವೃತ್ತ, ಪ್ರವಾಸಿ ಮಂದಿರದ ರಸ್ತೆಯಲ್ಲಿ ಬರುವ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ಶ್ರೀ ವಿಶ್ವಗುರು ಶ್ರೀ ಬಸವೇಶ್ವರ ವೃತ್ತ, ಮಹಾತ್ಮಗಾಂಧಿ ವೃತ್ತ, ಛತ್ರಪತಿ ಶಿವಾಜಿ ವೃತ್ತ, ಶ್ರೀ ಮಹಾರ್ಷಿ ವಾಲ್ಮೀಕಿ ವೃತ್ತದಲ್ಲಿ ,ಮಹಾನಿಯರ ವೃತ್ತವನ್ನು ನಿರ್ಮಿಸಿ ಕಂಚಿನ ಪುತ್ತಳಿಗಳನ್ನು ಕೂಡಿಸಬೇಕು ಹಾಗೂ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಲಾಗುತ್ತಿರುವ ರಸ್ತೆ ಕಾಮಗಾರಿಯನ್ನು ತಡೆಯಬೇಕು ಚರಂಡಿಗಳನ್ನು ಸರಿಪಡಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಇಟ್ಟುಕೊಂಡು ಮಾನ್ವಿ ಪಟ್ಟಣದಲ್ಲಿ ಜು.29ರಂದು ಮಾನ್ವಿ ನಾಗರಿಕರ ಹಿತ ರಕ್ಷಣಾ ವೇದಿಕೆ ನೇತೃತ್ವದಲ್ಲಿ ತಾಲೂಕಿನ ವಿವಿಧ ರಾಜಕೀಯ ಪಕ್ಷಗಳು,ಸಂಘ ಸಂಸ್ಥೆಗಳು ,ಸಾರ್ವಜನಿಕರ ಸಹಕಾರದೊಂದಿಗೆ ಮಾನ್ವಿ ಬಂದ್ ಹಾಗೂ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.

ಪ್ರಭುರಾಜ ಕೋಡ್ಲಿ,ಶೇಖ ಫರೀದ್ ಉಮ್ರಿ, ಕೆ.ನಾಗಲಿಂಗಸ್ವಾಮಿ, ಹರಿಹರಪಾಟೀಲ್, ಹೆಚ್.ದೇವರಾಜ, ಸುಬಾನ್ ಬೇಗ್,ಡಿ.ಬಸವನಗೌಡ,ಶಿವರಾಜ ಜಾನೇಕಲ್, ಹನುಮಂತಕೋಟೆ,ಶಹನಾವಾಜ್,ಲಕ್ಷ್ಮಣಜಾನೇಕಲ್, ಶರಣು ಮುದ್ದಂಗುಂಡಿ,ನುಸರತ್, ಮೆಹಬೂಬ್ ಕುರೇಶಿ,ನಾಸೀರ್ ಅಲಿ ಕುರೇಶಿ, ಸೇರಿದಂತೆ ಇನ್ನಿತರರು ಇದ್ದರು.

## ಅರ್ಹ ಮತದಾರರ ಹೆಸರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಸೇರಬೇಕು: ಸಹಾಯಕ ಕಾರ್ಯದರ್ಶಿ ಎ.ಎಸ್.ರಾಘವೇಂದ್ರ

ಎಸ್.ಐ.ಆರ್ ಕಾರ್ಯಕ್ರಮ ಈಗಾಗಲೇ ನಮ್ಮ ಜಿಲ್ಲೆಯಲ್ಲಿ ಚುರುಕಾಗಿ ನಡೆಯುತ್ತಿದ್ದು, ಮತಗಟ್ಟೆ ಮಟ್ಟದ ಅಧಿಕಾರಿ ಅವರು ಮನೆ-ಮನೆಗೆ ಹೋಗಿ ಎನ್ಯುಮರೇಷನ್ ಫಾರ್ಮ್ (ಗಣತಿ ಅರ್ಜಿ) ಹಂಚುವ ಕಾರ್ಯದಲ್ಲಿ ಶೇ.90ಕ್ಕೂ ಹೆಚ್ಚಿನಷ್ಟು ಪ್ರಕ್ರಿಯೆ ಮುಗಿದಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲೆಯ ಎಲ್ಲಾ ಎನ್.ಆರ್.ಎಲ್.ಎಮ್ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುವ ಸಮುದಾಯ ಸಂಪನ್ಮೂಲ ವ್ಯಕ್ತಿಗಳಾದ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಸಖಿಯರಿಗೆ ಹಾಗೂ ಸಿಬ್ಬಂದಿಯವರು ದಯವಿಟ್ಟು ನಿಮ್ಮ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ಅರ್ಹ ಮತದಾರರನ್ನು ಸೇರಿಸುವ ಕಾರ್ಯದಲ್ಲಿ ಎಸ್.ಐ.ಆರ್ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ವ್ಯವಸ್ಥಾಪಕರಾದ ವಿರೇಶ ಆರ್.ಪಿ, ಅಧೀಕ್ಷಕರಾದ ಮಹೆಬೂಬ್, ಸಲೀಂ ಮಲಿಕ್ ಹಾಗೂ ಜಿಲ್ಲಾ ಮತ್ತು ತಾಲ್ಲುಕು ಮಟ್ಟದ ಎನ್.ಆರ್.ಎಲ್.ಎಮ್ ಸಂಯೋಜಕರು ಸೇರಿದಂತೆ ಇತರರು ಇದ್ದರು.

### ವಿಕಸಿತ್ ಭಾರತ ಜಿ ರಾಮ್ ಜಿ 125 ದಿನಗಳ ಉದ್ಯೋಗದ ಖಾತ್ರಿ

## ಗ್ರಾಮೀಣಾವೃದ್ಧಿಯ ಹೊಸ ಸಂಕಲ್ಪ, ಉದ್ಯೋಗದ ಹೊಸ ಖಾತ್ರಿ: ಸಿಇಓ ಈಶ್ವರ್

ತಂತ್ರಜ್ಞಾನ ಆಧಾರಿತ ಯೋಜನೆ, ರಿಯಲ್-ಟೈಮ್ ಡ್ಯಾಶ್ ಬೋರ್ಡ್, ಎಐ ಆಧಾರಿತ ವಿಶ್ಲೇಷಣೆ, ನಾಗರಿಕ ಸಹಭಾಗಿತ್ವದ ವೇದಿಕೆ, ಗ್ರಾಮೀಣ ಆರ್ಥಿಕತೆಯ ಸಬಲೀಕರಣಕ್ಕೆ ಒತ್ತು, ಜಲಸಂರಕ್ಷಣೆ ಹಾಗೂ ಜಲ ಸಂಬಂಧಿತ ಕಾಮಗಾರಿಗಳಿಗೆ ಉತ್ತೇಜನ, ಜೀವನೋಪಾಯದ ಅವಕಾಶಗಳ ವಿಸ್ತರಣೆ, ಗ್ರಾಮೀಣ ಮೂಲಸೌಕರ್ಯಗಳ ಬಲವರ್ಧನೆ, ಅನೂಕೂಲಕರ ಸಾಮಾರ್ಥ್ಯದ ವಿಕಸನ ಮಾಡಲಾಗುವುದು.

ಈ ಪ್ರಮುಖ ಕಾರ್ಯಗಳಿಗೆ ವಿಶೇಷ ಆದ್ಯತೆ: ಜಲಸಂರಕ್ಷಣೆ, ಅಂತರ್ಜಲ ಮರುಪೂರಣ, ಜಲಾನಯನ ಪ್ರದೇಶದ ಅಭಿವೃದ್ಧಿ, ನೀರಾವರಿ, ಜಲಮೂಲಗಳ ಪುನಶ್ಚೇತನ, ಅರಣ್ಯೀಕರಣಕ್ಕೆ ಆದ್ಯತೆ ನೀಡಲಾಗುವುದು.

ಹವಾಮಾನ ಘಟನೆಗಳಿಂದ ರಕ್ಷಣೆಯ ಸಿದ್ಧತೆ: ಆಶ್ರಯ ಕೇಂದ್ರಗಳು, ತಟಬಂಧ/ನದಿ ಏರಿಗಳು, ಪ್ರವಾಹ ನಿರ್ವಹಣಾ ಮೂಲಸೌಕರ್ಯಗಳು, ಪುನರ್ವಸತಿ ಕಾರ್ಯಗಳು ಹಾಗೂ ಕಾಡ್ಗಿಚ್ಚು ನಿರ್ವಹಣೆಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕಾಂದೂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾರರ ವಿವರಗಳ ಪರಿಶೀಲನೆಗೆ ಸಹಕರಿಸಿ: ಡಾ. ಹಫೀಜ್ ಅಲ್ ಹುಸೈನಿ

ಕೊನೆಯ ದಿನಗಳಲ್ಲಿ ಒತ್ತಡ ಮತ್ತು ಗಲಿಬಿಲಿಯ ತೊಂದರೆಗೆ ಅವಕಾಶ ನೀಡದೇ ಆದಷ್ಟು ಬೇಗ ಅರ್ಜಿ ನಮೊನೆಯನ್ನು ಭರ್ತಿ ಮಾಡಿ ಸಲ್ಲಿಸುವಂತೆ ಮನವಿ ಮಾಡಿದ ಅವರು, ದಿನಗಳು ಸಮೀಪಿಸುತಿದ್ದಂತೆ ಅನಗತ್ಯ ತೊಂದರೆಗಳು ಉಂಟಾಗುತ್ತವೆ, ಹೀಗಾಗಿ ಹಿನ್ನು ಸಮಯವಿದೆ ಎಂದು ಕಾಯದೇ ಆದಷ್ಟು ಬೇಗ ತಮ್ಮ ಎಸ್.ಐ.ಆರ್ ಅರ್ಜಿಗಳನ್ನು ಭರ್ತಿ ಮಾಡುವಂತೆ ಅವರು ಕಿವಿ ಮಾತು ಹೇಳಿದರು. ನಿಗದಿತ ಸಮಕ್ಕೂ ಮುನ್ನ ನಮೂನೆ ಸಲ್ಲಿಸುವಂತೆ ಅವರು ಸಲಹೆ ನೀಡಿದರು. ಅಲ್ಲದೆ, ಎಲ್ಲಾ ಅರ್ಹ ಮತದಾರರು ಬೂತ್ ಮಟ್ಟದ ಅಧಿಕಾರಿಗಳೊಂದಿಗೆ (ಬಿಎಲ್‌ಓ) ಸಹಕರಿಸಿ ತಮ್ಮ ವಿವರಗಳನ್ನು ಪರಿಶೀಲಿಸಿ ನವೀಕರಿಸಿಕೊಳ್ಳುವಂತೆ ಕರೆ ನೀಡಿದರು.

## ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ನೇರ ಸಾಲ ಯೋಜನೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 23:** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವಿಪ್ರ ಸ್ವ-ಉದ್ಯಮ ನೇರ ಸಾಲ ಯೋಜನೆಯಡಿ 2026-27ನೇ ಸಾಲಿಗೆ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗಕೈಗೊಳ್ಳಲು ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ ನೇರವಾಗಿ ಸಾಲ-ಸಹಾಯ ಧನ ಮಂಜೂರು ಮಾಡಲು ಉದ್ದೇಶಿಸಿದೆ. ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದ ಹಿಂದುಳಿದ ಬ್ರಾಹ್ಮಣ ಸಮುದಾಯದವರು ಸ್ವಯಂ ಉದ್ಯೋಗ ವೃತ್ತಿಗಳಾದ ಹಸು ಸಾಕಾಣಿಕೆ, ಗುಡಿಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ (ಕ್ಯಾಟರಿಂಗ್), ಅಂಗಡಿ, ಟೈಲರಿಂಗ್ ಹಾಗೂ ಟ್ಯಾಕ್ಸಿ ಇತ್ಯಾದಿ ಇತರೆ ಯಾವುದೇ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ವಾರ್ಷಿಕವಾಗಿ ಶೇ.4% ದರದಲ್ಲಿ ಕನಿಷ್ಠ 1.00 ಲಕ್ಷ ರೂ. ಹಾಗೂ ಗರಿಷ್ಠ 2.00 ಲಕ್ಷ ರೂ.ಗಳ ಆರ್ಥಿಕ ನೆರವು ಮಂಜೂರು ಮಾಡಲಾಗುವುದು.

ಸಾಲ ಸೌಲಭ್ಯವನ್ನು ಪಡೆಯಲು ಬೇಕಾದ ಅರ್ಹತೆಗಳು ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದವರಾಗಿರಬೇಕು. ಅರ್ಜಿದಾರರು ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣ ಪತ್ರ (ಇಡ್ಲೂಎಸ್ ಪ್ರಮಾಣ ಪತ್ರ) ಹೊಂದಿರಬೇಕು.

8 ಲಕ್ಷ ಆದಾಯ ಮಿತಿ. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 65 ವರ್ಷದ ಒಳಗಿನವರಾಗಿರಬೇಕು. ಒಂದು ಕುಟುಂಬದಿಂದ ಒಬ್ಬರು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಸಾಲದ ಉದ್ದೇಶವನ್ನು 10 ಪದಗಳಿಗಿಂತ ಕಡಿಮೆ ಇಲ್ಲದಂತೆ, ಸ್ಪಷ್ಟವಾಗಿ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕು. ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ಮಹಿಳೆಯರಿಗೆ 33%, ವಿಶೇಷಚೇತನರಿಗೆಶೇ 5% ಮೀಸಲಾತಿಯನ್ನು ನೀಡಲಾಗುವುದು.

ಹಾಗೂ ಅರ್ಜಿದಾರರ ಆಧಾರ್ ಕಾರ್ಡ್ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು. ಮತ್ತು ಬ್ಯಾಂಕ್ ಖಾತೆ ಸೀಡ್ ಆಗಿರಬೇಕು.

ಆಸಕ್ತರು 2026ರ ಆಗಸ್ಟ್ 31ರ ಸಂಜೆ 5.30ಗಂಟೆಯೊಳಗಾಗಿ ವೆಬ್‌ಸೈಟ್ ವಿಳಾಸ: www.ksbdb.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ: 8762249230/ 8029605888ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯ ಮಿಷನ್ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ರಾಜಶೇಖರ್, ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಸನಮುಕ್ತ ದಿನಾಚರಣೆ ಅರ್ಥಪೂರ್ಣವಾಗಿ ಆಚರಿಸಲು ಪೂರ್ವಭಾವಿ ಸಭೆ



**ಕಲಬುರಗಿ: ಜು.23:** ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಶ್ರೀ ಶ್ರೀ ಶ್ರೀ.ಮ.ನಿ.ಪ್ರ. ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ 'ವ್ಯಸನಮುಕ್ತ ದಿನಾಚರಣೆ' ಯನ್ನು ಯಶಸ್ವಿಯಾಗಿ ಆಚರಿಸಲು ಅಗತ್ಯ ಪೂರ್ವಸಿದ್ಧತೆ ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೂಚಿಸಿದರು.

ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಅಗಸ್ಟ್ 01 ರಂದು ಶನಿವಾರ ಮಧ್ಯಾಹ್ನ 11 ಗಂಟೆಗೆ ಕಲಬುರಗಿ ಸರ್ಕಾರಿ ಪದವಿ ಪೂರ್ವ ಕಾಲೇಜು ಆದರ್ಶ ನಗರದಲ್ಲಿ ಶ್ರೀಶ್ರೀಶ್ರೀ.ಮ.ನಿ.ಪ್ರ ಡಾ. ಮಹಾಂತ ಶಿವಯೋಗಿಗಳ ಜಯಂತಿಯ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮ ತಾಲೂಕು ಮಟ್ಟದಲ್ಲಿ ತಹಶೀಲ್ದಾರರ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಡೆಸಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ತಿಳಿಸಿದರು.

ಎಲ್ಲ ಅಧಿಕಾರಿಗಳು ತಮಗೆ ನಿರ್ವಹಿಸಿದ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಕುಡಿಯುವ ನೀರು ಹಾಗೂ ಉಪಹಾರದ ವ್ಯವಸ್ಥೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಎಲ್ಲ ಅರೆ ಸರ್ಕಾರಿ ಕಚೇರಿ ಮತ್ತು ಶಾಲಾ-ಕಾಲೇಜುಗಳಲ್ಲಿ ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಜಯಂತಿ ಆಚರಿಸಬೇಕು. ಸೂಚಿಸಿದರು.

ವ್ಯಸನದ ದುಷ್ಪರಿಣಾಮಗಳು ಹಾಗೂ ಶ್ರೀ ಮಹಾಂತ ಶಿವಯೋಗಿಗಳ ತತ್ವಗಳ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು 15-20 ಮಿಷಗಳ ವಿಶೇಷ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ತೋಟಗಾರಿಕೆ ಇಲಾಖೆಯಿಂದ ವೇದಿಕೆ ಅಲಂಕಾರ ಹಾಗೂ ಆರೋಗ್ಯ ಇಲಾಖೆಯಿಂದ ಅಗತ್ಯ ಸಹಕಾರ ಎಂದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕ ಜಡಿಯಪ್ಪ ಗೆದ್ಲಗಟ್ಟಿ ಅವರು ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಅಜೀಂ ಪಾಶಾ, ಜಿಲ್ಲಾ ಪಂಚಾಯತ್ ಸಹಾಯಕ ಯೋಜನಾಧಿಕಾರಿ ಚನ್ನಪ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರ ಕಾರ್ಯಾಲಯದ ಆರೋಗ್ಯ ನಿರೀಕ್ಷಣಾಧಿಕಾರಿ ಇಕ್ಬಾಲ್ ಮಹಾಗಾವಿ, ಆರೋಗ್ಯ ಇಲಾಖೆಯ ನಾಗರಾಜ ಬಿರಾದಾರ, ಸಮಾಜ ಕಲ್ಯಾಣ ಇಲಾಖೆಯ ಲೆಕ್ಕಾಧೀಕ್ಷಕ ಮೊಹಮ್ಮದ ಇರ್ಫಾನ್, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ರಾಜಶೇಖರ ಗೋನಾಯಕ, ಉಪನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಅಧೀಕ್ಷಕ ಆಕಾಶದೀಪ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ತಹಶೀಲ್ದಾರರು ಉಪಸ್ಥಿತರಿದ್ದರು.

## ಬೆಳೆ ವಿಮೆ ಜಾಗೃತಿ ವಾಹನಗಳಿಗೆ ಚಾಲನೆ: ಪ್ರತಿ ರೈತರೂ ಬೆಳೆ ವಿಮೆ ಮಾಡಿಸಿಕೊಳ್ಳಿ; ಜಿಲ್ಲಾಧಿಕಾರಿ ಡಾ. ಆನಂದ



**ವಿಜಯಪುರ, ಜು.23**: ಜಿಲ್ಲೆಯ ರೈತರಲ್ಲಿ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಕುರಿತು ಜಾಗೃತಿ ಮೂಡಿಸಿ, ಹೆಚ್ಚಿನ ರೈತರು ಯೋಜನೆಯ ಲಾಭ ಪಡೆಯುವ ಉದ್ದೇಶದಿಂದ ಆರಂಭಿಸಲಾದ ಬೆಳೆ ವಿಮೆ ಜಾಗೃತಿ ವಾಹನಗಳಿಗೆ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕೃಷಿ ಸಂಪೂರ್ಣವಾಗಿ ಪ್ರಕೃತಿಯನ್ನು ಅವಲಂಬಿಸಿರುವ ವೃತ್ತಿಯಾಗಿದ್ದು, ಅತಿವೃಷ್ಟಿ, ಅನಾವೃಷ್ಟಿ, ಗಾಳಿ, ಕೀಟ ಹಾಗೂ ರೋಗಬಾಧೆಗಳಿಂದ ಬೆಳೆ ಹಾನಿಯಾಗುವ ಸಾಧ್ಯತೆ ಹೆಚ್ಚಿದೆ. ಇಂತಹ ಸಂದರ್ಭಗಳಲ್ಲಿ ರೈತರಿಗೆ ಆರ್ಥಿಕ ಭದ್ರತೆ ನೀಡುವ ಪ್ರಮುಖ ಯೋಜನೆಯೇ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಎಂದು ಹೇಳಿದರು. ಜಿಲ್ಲೆಯ ಪ್ರತಿಯೊಬ್ಬ ಅರ್ಹ ರೈತರೂ ಬೆಳೆ ವಿಮೆ ಮಾಡಿಸಿಕೊಳ್ಳುವ ಮೂಲಕ ತಮ್ಮ ಕೃಷಿಗೆ ಭದ್ರತೆ ಒದಗಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಯೋಜನೆಯಿಂದ ವಂಚಿತರಾಗಬಾರದು ಎಂದು ಅವರು ಮನವಿ ಮಾಡಿದರು. ಜಾಗೃತಿ ವಾಹನಗಳು ಜಿಲ್ಲೆಯ ಎಲ್ಲಾ ತಾಲೂಕು ಹಾಗೂ ಗ್ರಾಮಗಳಲ್ಲಿ ಸಂಚರಿಸಿ, ಯೋಜನೆಯ ಉದ್ದೇಶ, ನೋಂದಣಿ ವಿಧಾನ, ಅಗತ್ಯ ದಾಖಲೆಗಳು, ವಿಮೆ ನೋಂದಣಿಯ ಅಂತಿಮ ದಿನಾಂಕ, ಬೆಳೆ ಹಾನಿಯಾದಲ್ಲಿ ಪರಿಹಾರ ಪಡೆಯುವ ವಿಧಾನ ಸೇರಿದಂತೆ ಸಂಪೂರ್ಣ ಮಾಹಿತಿಯನ್ನು ರೈತರಿಗೆ ತಲುಪಿಸಲಿವೆ. ರೈತರು ರೈತ ಸಂಪರ್ಕ ಕೇಂದ್ರಗಳು, ಗ್ರಾಮ ಪಂಚಾಯಿತಿಗಳು, ಬ್ಯಾಂಕ್‌ಗಳು ಹಾಗೂ ಸಾಮಾನ್ಯ ಸೇವಾ ಕೇಂದ್ರಗಳ (CSC) ಮೂಲಕ ಬೆಳೆ ವಿಮೆ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ.

ಕೃಷಿ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಮಾತನಾಡಿ, 2026-27ನೇ ಸಾಲಿನ ಮುಂಗಾರು ಹಂಗಾಮಿಗೆ ವಿವಿಧ ಬೆಳೆಗಳಿಗೆ ವಿಮೆ ಸೌಲಭ್ಯ ಕಲ್ಪಿಸಲಾಗಿದ್ದು, ಸಾಲ ಪಡೆದ ರೈತರು ಸಂಬಂಧಿಸಿದ ಬ್ಯಾಂಕ್‌ಗಳಲ್ಲಿ ಹಾಗೂ ಸಾಲ ಪಡೆಯದ ರೈತರು ಅಗತ್ಯ ದಾಖಲೆಗಳೊಂದಿಗೆ ರೈತ ಸಂಪರ್ಕ ಕೇಂದ್ರ ಅಥವಾ ಸಿಎಸ್‌ಸಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ವಿಮಾ ಕಂಪನಿ ಪ್ರತಿನಿಧಿಗಳು ಉಪಸ್ಥಿತರಿದ್ದರು.


## ಕೋಡ್ಲಿ ವಸತಿ ಶಾಲೆಯಲ್ಲಿ ಚುನಾವಣೆ : ಶಾಲಾ ಸಂಸತ್ತು ರಚನೆ



**ಕಾಳಗಿ:ಜು.23.** ತಾಲೂಕಿನ ಕೋಡ್ಲಿ ಗ್ರಾಮದ ಕಿತ್ತೂರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ 2026-27 ನೇ ಸಾಲಿನ ಶಾಲಾ ಸಂಸತ್ತು ರಚನೆಯ ಹಿನ್ನೆಲೆಯಲ್ಲಿ ಇತ್ತೀಚಿಗೆ ಚುನಾವಣೆ ನಡೆಯಿತು. ಚುನಾವಣೆಗಳಲ್ಲಿ ಅನುಸರಿಸುವ ಬಹುತೇಕ ವಿಧಾನಗಳನ್ನು ಅನುಸರಿಸಲಾಯಿತು. ಮಕ್ಕಳು ಖುಷಿಯಿಂದ ಮತ ಚಲಾಯಿಸಿದರು. ಮತ ಎಣಿಕೆ ಮುಗಿದ ನಂತರ ಶಾಲಾ ಸಂಸತ್ತು ರಚಿಸಲಾಯಿತು. ವಿಜೇತ ವಿದ್ಯಾರ್ಥಿನಿಯರಿಗೆ ವಿವಿಧ ಖಾತೆಗಳನ್ನು ಹಂಚಿಕೆ ಮಾಡಲಾಯಿತು.ಸಮಾಜ ವಿಜ್ಞಾನ ಶಿಕ್ಷಕಿ ಮಹಾನಂದ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

ಈ ಸಂದರ್ಭದಲ್ಲಿ ಕೋಡ್ಲಿ ಪಂಚಾಯತ್ ಅಭಿವೃದ್ದಿ ಅಧಿಕಾರಿ ದೇವಿಂದ್ರ ಪೂಜಾರಿ, ಬಿಲ್ ಕಲೆಕ್ಟರ್ ನಾಗನಾಥ ರೆಡ್ಡಿ, ಪತ್ರಕರ್ತ ರಮೇಶ್ ಕುಡಳ್ಳಿ,ಪ್ರಾಂಶುಪಾಲ ಡಾ. ರಾಜಶೇಖರ್ ಮಾಂಗ್, ಶಿಕ್ಷಕರಾದ ಅಶೋಕ ಹಡಪದ, ಶಿವಾನಂದ ಬೀಳಗಿ, ನಾಗಶೆಟ್ಟಿ,ಗೋಪಾಲದಾಸ್ ಸಾಹುಕಾರ, ರೇವಣಸಿದ್ದಯ್ಯ ಹಿರೇಮಠ,ರೇಖಾ ಸೇರಿಕಾರ, ತುಕಾರಾಂ ಚವಾಣ್,ಕವಿತಾ ಭರಶೆಟ್ಟಿ, ಅಶೋಕ್, ಜ್ಯೋತಿ, ನಿಲಯಪಾಲಕ ಶಿವಕುಮಾರ್ ಹಿರೇಮಠ ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇ ಟೋಲ್ ಶುಲ್ಕ ಮತ್ತೆ ಏರಿಕೆ




**ಬೆಂಗಳೂರು,ಜು.23:**ಬೆಂಗಳೂರು-ಮೈಸೂರು ಸಂಚಾರಿಗಳಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತೊಮ್ಮೆ ದರ ಏರಿಕೆಯ ಶಾಕ್ ನೀಡಿದೆ. ಕೇವಲ ನಾಲ್ಕು ತಿಂಗಳ ಅವಧಿಯಲ್ಲಿ ಎರಡನೇ ಬಾರಿಗೆ ಟೋಲ್ ದರವನ್ನು ಪರಿಷ್ಕರಿಸಲಾಗಿದ್ದು, ನೂತನ ದರಗಳು ಜುಲೈ 21ರ ಮಧ್ಯರಾತ್ರಿಯಿಂದಲೇ ಜಾರಿಗೆ ಬಂದಿವೆ.

ಕಳೆದ ಮೂರು ವರ್ಷಗಳಲ್ಲಿ ಎಕ್ಸ್‌ಪ್ರೆಸ್‌ವೇ ಟೋಲ್ ದರ ಶೇಕಡಾ 37 ರಷ್ಟು ಹೆಚ್ಚಳ ಕಂಡಂತಾಗಿದೆ. ಬೆಂಗಳೂರು ನಗರ ವ್ಯಾಪ್ತಿಯ ಕಣಿಮಿಣಿಕೆ ಹಾಗೂ ಬೆಂಗಳೂರು ದಕ್ಷಿಣ (ಹಳೆಯ ರಾಮನಗರ) ವ್ಯಾಪ್ತಿಯ ಶೇಷಗಿರಿಹಳ್ಳಿ ಟೋಲ್ ಪ್ಲಾಜಾಗಳಲ್ಲಿ ಈ ಹೊಸ ದರಗಳು ಅನ್ವಯವಾಗಲಿವೆ.

ಹೊಸ ಟೋಲ್ ದರಗಳ ವಿವರ (ಒಂದು ಕಡೆಯ ಸಂಚಾರಕ್ಕೆ):ಕಾರು, ಜೀಪ್, ವ್ಯಾನ್ (LMV): 185 (ಹಳೆಯ ದರ: 180), ಲಘು ವಾಣಿಜ್ಯ ವಾಹನ / ಮಿನಿ ಬಸ್: 295 ,ಎರಡು ಆಕ್ಸಲ್ ಟ್ರಕ್ / ಬಸ್: 620 ,ಮೂರು ಆಕ್ಸಲ್ ವಾಣಿಜ್ಯ ವಾಹನ: 675, ಭಾರಿ ಯಂತ್ರೋಪಕರಣ / ಬಹು-ಆಕ್ಸಲ್ ವಾಹನ (4 ರಿಂದ 6 ಆಕ್ಸಲ್):970 ಬೃಹತ್ ವಾಹನಗಳು (7 ಅಥವಾ ಹೆಚ್ಚು ಆಕ್ಸಲ್): 1,180 ,

ಪಾಸ್ ಮತ್ತು ರಿಯಾಯಿತಿ ಮಾಹಿತಿ:ಒಂದೇ ದಿನದ ರಿಟರ್ನ್ ಜರ್ನಿ: 275 ,ಮಾಸಿಕ ಪಾಸ್ (50 ಪ್ರಯಾಣಗಳು): 6,100 (160 ಏರಿಕೆ) ಟೋಲ್ ಪ್ಲಾಜಾದಿಂದ 20 ಕಿ.ಮೀ ವ್ಯಾಪ್ತಿಯಲ್ಲಿರುವ ಸ್ಥಳೀಯ ನಿವಾಸಿಗಳ ಮಾಸಿಕ ಪಾಸ್ ದರದಲ್ಲಿ ಯಾವುದೇ ಬದಲಾವಣೆಯಿಲ್ಲ

2023ರ ಜನವರಿಯಲ್ಲಿ ಹೊರಡಿಸಲಾದ ಟೋಲ್ ಗ್ಯಾಜೆಟ್ ಅಧಿಸೂಚನೆ ಹಾಗೂ ಜುಲೈ 18ರಂದು ದೊರೆತ ಆಡಳಿತಾತ್ಮಕ ಅನುಮೋದನೆಯನ್ವಯ 2026-27ನೇ ಹಣಕಾಸು ವರ್ಷದ ಪರಿಷ್ಕರಣೆಯಾಗಿ ಈ ದರ ಏರಿಕೆ ಮಾಡಲಾಗಿದೆ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ಎಸ್ಐಆರ್ ಅರ್ಜಿ ಭರ್ತಿ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ

**ಬೀದರ್:** ಎಸ್‌ಐಆರ್ ಯೋಜನೆಯ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಮತ್ತು ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ರಾಘವೇಂದ್ರ ಉಪಾಧ್ಯೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ರವರು ಹೇಳಿದರು.

ಬೀದರ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡ, ಎಸ್‌ಐಆರ್ ಯೋಜನೆಯ ಕುರಿತು ಅರಿವು ಮೂಡಿಸುವ ಹಾಗೂ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಅಗತ್ಯವಾದ ಮಾಹಿತಿ ಮತ್ತು ಮಾರ್ಗದರ್ಶನ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಾರ್ವಜನಿಕರಿಗೆ ಯೋಜನೆಯ ಬಗ್ಗೆ ಸೂಕ್ತ ಮಾಹಿತಿ ನೀಡಿ, ಅರ್ಹ ಫಲಾನುಭವಿಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಸಹಕಾರ ಒದಗಿಸಬೇಕು. ಯೋಜನೆಯ ಅನುಷ್ಠಾನದಲ್ಲಿ ಎದುರಾಗುವ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಿ, ಸರ್ಕಾರದ ಆಶಯದಂತೆ ಯೋಜನೆಯ ಸೌಲಭ್ಯಗಳು ಜನರಿಗೆ ತಲುಪುವಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ನಂತರ ಮಾತನಾಡಿದ ಬಸಪ್ಪಾ ಕೊಟ್ಟೆಪ್ಪಗೋಳ ಉಪ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ ಬೀದರ ರವರ ಮಾತನಾಡಿ ಯಾವುದೇ ಯೋಜನೆ ಯಶಸ್ವಿಯಾಗಬೇಕಾದರೆ ಅದರ ಅನುಷ್ಠಾನದಲ್ಲಿ ತೊಡಗಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಯೋಜನೆಯ ಸಂಪೂರ್ಣ ಮಾಹಿತಿ ಹಾಗೂ ಸ್ಪಷ್ಟ ಅರಿವು ಇರಬೇಕು. ಖಖಖ ಯೋಜನೆಯ ಉದ್ದೇಶಗಳನ್ನು ಪರಿಣಾಮಕಾರಿಯಾಗಿ ಈಡೇರಿಸಲು ಎಲ್ಲರೂ ಸಮನ್ವಯದಿಂದ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ನಂತರ ಮಾತನಾಡಿದ ಡಾ. ಗೌತಮ ಅರಳಿ ರಾಜ್ಯ ಮಟ್ಟದ ಮಾಸ್ಟರ್ ಟ್ರೈನರ್ ರವರು ಈಗಾಗಲೇ ನಿಮಗೆ BLO ರವರು ನೀಡಿರುವ ಫಾರಂಗಳು ಚೆನ್ನಾಗಿ ಓದಿಸಿಕೊಂಡು ಭರ್ತಿ ಮಾಡಿ ಕೊಡಿ, ಯಾರು ವಿನಾ ಕಾರಣ SIR ಫಾರಂಗಳು




ನಿಮ್ಮ ಬಳಿಯೇ ಇಟ್ಟುಕೊಳ್ಳಬೇಡಿ ಹಾಗೂ ಇದರ ಕುರಿತು ಏನೇ ಗೊಂದಲಗಳು ಇದ್ದಲಿ ಸಹಾಯವಾಣಿ ಸಂಖ್ಯೆ 1950 ಕೆ ಕರೆ ಮಾಡಿ ಎಂದು ತಿಳಿಸಿದರು. ಜೊತೆಗೆ ತರಬೇತಿ ಕಾರ್ಯಾಗಾರದಲ್ಲಿ SIR ಯೋಜನೆಯ ಉದ್ದೇಶ, ಅನುಷ್ಠಾನ ವಿಧಾನ, ಮಾರ್ಗಸೂಚಿಗಳು ಹಾಗೂ ಕ್ಷೇತ್ರಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿವರವಾದ ಮಾಹಿತಿ ನೀಡಿದರು. ಹಾಗೂ ತರಬೇತಿಯಲ್ಲಿ ಭಾಗವಹಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ರಾಘವೇಂದ್ರ ಉಪಾಧ್ಯೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಸಪ್ಪಾ ಕೊಟ್ಟೆಪ್ಪಗೋಳ ಉಪ ಕಾರ್ಯದರ್ಶಿಗಳು, ಡಾ. ಗೌತಮ ಅರಳಿ ರಾಜ್ಯ ಮಟ್ಟದ ಮಾಸ್ಟರ್ ಟ್ರೈನರ್ ಮತ್ತು ಜಿಲ್ಲಾ ಪಂಚಾಯತ ಕಚೇರಿ ಎಲ್ಲಾ ಶಾಖೆಯ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಇತರರು ಇದ್ದರು.

## ಪತಿ ಕೊಲೆ: ಸೋನಂ ಜಾಮೀನು ರದ್ದು



**ನವದೆಹಲಿ,ಜು.23–** ಮಧುಚಂದ್ರದ ಸಮಯದಲ್ಲಿ ಪತಿ ರಾಜಾ ರಘುವಂಶಿಯನ್ನು ಕೊಂದ ಆರೋಪ ಹೊತ್ತಿರುವ ಸೋನಂ ರಘುವಂಶಿಗೆ ನೀಡಲಾಗಿದ್ದ ಜಾಮೀನನ್ನು ಸುಪ್ರೀಂಕೋರ್ಟ್ ಇಂದು ರದ್ದುಗೊಳಿಸಿದೆ.

ಅಲ್ಲದೆ ಮೂರು ವಾರಗಳಲ್ಲಿ ಶರಣಾಗುವಂತೆ ಸೋನಂ ರಘುವಂಶಿಗೆ ಸುಪ್ರೀಂ ಕೋರ್ಟ್ ಸೂಚಿಸಿದೆ. ಆದಾಗ್ಯೂ, ವಿಚಾರಣೆ ವಿಳಂಬವಾದರೆ, ಆರು ತಿಂಗಳ ನಂತರ ಹೊಸ ಜಾಮೀನು ಅರ್ಜಿ ಸಲ್ಲಿಸಲು ಆಕೆಗೆ ಸ್ವಾತಂತ್ರ್ಯವಿದೆ ಎಂದು ನ್ಯಾಯಾಲಯ ಹೇಳಿದೆ.

ಸೋನಮ್ ರಘುವಂಶಿಗೆ ನೀಡಲಾದ ಜಾಮೀನನ್ನು ಪ್ರಶ್ನಿಸಿ ಮೇಘಾಲಯ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿತ್ತು. ಏಪ್ರಿಲ್ 28 ರಂದು ಶಿಲ್ಲಾಂಗ್‌ನ ನ್ಯಾಯಾಲಯ ಸೋನಮ್ ರಘುವಂಶಿಗೆ ಜಾಮೀನು ನೀಡಿತು. ಈಗ ಜಾಮೀನು ರದ್ದು ಮಾಡಲಾಗಿದೆ.

ಇಂದೋರ್ ಮೂಲದ ಉದ್ಯಮಿ ರಾಜಾ ರಘುವಂಶಿ ಅವರನ್ನು ಮೇ 2025 ರಲ್ಲಿ ಮೂವರು ದುಷ್ಕರ್ಮಿಗಳಿಂದ ಮೇಘಾಲಯದ ಪೂರ್ವ ಖಾಸಿ ಹಿಲ್ಸ್ ಜಿಲ್ಲೆಯಲ್ಲಿ ಕೊಲೆಯಾಗಿದ್ದರು.. ಮಧ್ಯಪ್ರದೇಶದ ಉದ್ಯಮಿ ತಮ್ಮ ಪತ್ನಿಯೊಂದಿಗೆ ಹನಿಮೂನ್‌ಗೆ ಬಂದಿದ್ದಾಗ ಅವರನ್ನು ಗುಂಡಿಕ್ಕಿ ಕೊಲ್ಲಲಾಗಿತ್ತು. ಈ ಘಟನೆ ಹಿಂದಿನ ರುವಾರಿ ಪತ್ನಿಯೇ ಎನ್ನುವುದು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಬಂಧಿಸಲಾಗಿತ್ತು. ಆ ನಂತರ ಜಾಮೀನು ಮಂಜೂರು ಮಾಡಲಾಗಿತ್ತು.

ವಿಚಾರಣೆಯ ಸಮಯದಲ್ಲಿ, ಸೋನಮ್ ರಘುವಂಶಿ ಅವರ ವಕೀಲರು ಪ್ರಕರಣದಲ್ಲಿ ಒಟ್ಟು 94 ಸಾಕ್ಷಿಗಳನ್ನು ಹೆಸರಿಸಲಾಗಿದೆ ಎಂದು ಹೇಳಿದ್ದರು ಈ ಪೈಕಿ ಇಲ್ಲಿಯವರೆಗೆ ಕೇವಲ ನಾಲ್ಕು ಸಾಕ್ಷಿಗಳ ಹೇಳಿಕೆಗಳನ್ನು ದಾಖಲಿಸಲಾಗಿದೆ. ಪೂರಕ ಆರೋಪಪಟ್ಟಿಯನ್ನೂ ಸಲ್ಲಿಸಲಾಗಿದ್ದು, ಕಠಿಣ ಷರತ್ತುಗಳಿಗೆ ಒಳಪಟ್ಟು ಅವರಿಗೆ ಜಾಮೀನು ನೀಡಲಾಗಿತ್ತು

ಉತ್ತರ ಪ್ರದೇಶದ ಗಾಜಿಪುರದಲ್ಲಿ ಬಂಧಿಸಲಾಗಿತ್ತು. ಮತ್ತು ಅವರ ಬಂಧನವನ್ನು ಶರಣಾಗತಿ ಎಂದು ತಪ್ಪಾಗಿ ಬಿಂಬಿಸಲಾಗುತ್ತಿದೆ ಎಂದು ಹೇಳಲಾಗಿತ್ತು.ಇದೀಗ ಸುಪ್ರೀಂಕೋರ್ಟ್ ಜಾಮೀನು ರದ್ದು ಮಾಡಿದೆ.

ಸೋನಂ ಅವರ ವಕೀಲರು, ಅವರು ಜಾಮೀನಿನ ಕಟ್ಟುನಿಟ್ಟಿನ ಷರತ್ತುಗಳನ್ನು ಪಾಲಿಸುತ್ತಿದ್ದಾರೆ ಮತ್ತು ಅವರು ಪರಾರಿಯಾಗುವ ಯಾವುದೇ ಉದ್ದೇಶ ಹೊಂದಿಲ್ಲ ಎಂದು ಹೇಳಿದ್ದರು

ಮೇಘಾಲಯ ಸರ್ಕಾರವನ್ನು ಪ್ರತಿನಿಧಿಸುವ ಎಸ್‌ಜಿ ತುಷಾರ್ ಮೆಹ್ತಾ, ಆರೋಪ ಪಟ್ಟಿಯಲ್ಲಿ ದಾಖಲಾಗಿರುವಂತೆ ಆರೋಪಿ ಸ್ವತಃ ಶರಣಾಗಿರುವುದರಿಂದ ಬಂಧನಕ್ಕೆ ಉಲ್ಲೇಖಿಸಲಾದ ಆಧಾರಗಳು ಆಧಾರರಹಿತವಾಗಿವೆ ಎಂದು ಹೇಳಿದರು.

ಕಳೆದ ವಿಚಾರಣೆಯ ಸಂದರ್ಭದಲ್ಲಿ, ಸುಪ್ರೀಂ ಕೋರ್ಟ್ ಸೋನಂ ವಕೀಲರಿಗೆ ಸೋನಂ ರಘುವಂಶಿ ಶರಣಾಗಬೇಕೆ ಅಥವಾ ನ್ಯಾಯಾಲಯ ಅವರ ಜಾಮೀನು ರದ್ದುಗೊಳಿಸುವ ಬಗ್ಗೆ ನಿರ್ಧರಿಸಬೇಕೆ ಎಂಬ ಎರಡು ಆಯ್ಕೆಗಳನ್ನು ನೀಡಿತ್ತು.ಈಗ ಜಾಮೀನು ರದ್ದುಗೊಳಿಸಿ ಶರಣಾಗುವಂತೆ ಸೂಚಿಸಿದೆ.

# ಹಡಪದ ಅಪ್ಪಣ್ಣ ಜಯಂತಿಯನ್ನು ಅದ್ದೂರಿಯಾಗಿ ಆಚರಿಸೋಣ : ಅಪರ ಜಿಲ್ಲಾಧಿಕಾರಿ ಶಿವನಂದ ಕರಾಳೆ

**ಬೀದರ, ಜು.23:** ಪ್ರತಿ ವರ್ಷದಂತೆ ಈ ವರ್ಷವು ಜುಲೈ. 29 ರಂದು ಹಡಪದ ಅಪ್ಪಣ್ಣ ಜಯಂತಿಯನ್ನು ಎಲ್ಲರೂ ಸೇರಿ ಅದ್ದೂರಿಯಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಶಿವನಂದ ಕರಾಳೆ ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಹಡಪದ ಅಪ್ಪಣ್ಣ ಜಯಂತಿ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜುಲೈ. 29 ರಂದು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ 10 ಗಂಟೆಗೆ ಹಳೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿರು ಶಿವಾಜಿ ವೃತ್ತದಿಂದ ವಿವಿಧ ಕಲಾ ತಂಡಗಳೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಅಂದು ಮದ್ಯಾಹ್ನ 1 ಗಂಟೆಗೆ ಪೂಜ್ಯ ಚನ್ನಬಸವ ಪಟ್ಟದ್ದೆವರು ಜಿಲ್ಲಾ ರಂಗಮಂದಿರ ಬೀದರನಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ನಾಡಗೀತೆ, ಸುಗಮ ಸಂಗೀತ ಹಾಗೂ ಉಪನ್ಯಾಸ ಕಾರ್ಯಕ್ರಮ ಜರುಗಲಿವೆ. ಈ ಕಾರ್ಯಕ್ರಮಲ್ಲಿ ಹೆಚ್ಚಿನ ಜನರು ಭಾಗವಹಿಸಬೇಕೆಂದು ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ರಂಗಮಂದಿರದಲ್ಲಿ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜನೆ ಮಾಡಬೇಕು. ಬೀದರ ನಗರಸಭೆ ವತಿಯಿಂದ ಹಡಪದ ಅಪ್ಪಣ್ಣ ಪುತ್ಥಳಿಯ ಸುತ್ತಲು ಸ್ವಚ್ಚತೆ, ದೀಪಾಲಂಕಾರ ಹಾಗೂ ಪುಥ್ಥಳಿಗೆ ಹೂಮಾಲೆ ಅಲಂಕಾರ ವ್ಯವಸ್ಥೆ ಮಾಡಬೇಕು. ಅಂದು ಸರಕಾರದ ಎಲ್ಲಾ ವಿವಿಧ ಇಲಾಖೆಗಳಲ್ಲಿ ಶಾಲಾ ಕಾಲೇಜು ಹಾಗೂ ವಿದ್ಯಾರ್ಥಿಗಳ ವಸತಿನಿಲಯಗಳಲ್ಲಿ ಹಡಪದ ಅಪ್ಪಣ್ಣ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತಿಯನ್ನು ಆಚರಿಸುವಂತೆ ಅವರು ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪೂಜಾರಿ ಮಾತನಾಡಿ, ಕಾರ್ಯಕ್ರಮ ನಡೆಯುವ ದಿನದಂದು ಯಾವುದೇ ತೊಂದರೆಯಾಗದಂತೆ ಸೂಕ್ತ ಪೊಲೀಸ್ ಬಂದೋಬಸ್ತ



ವ್ಯವಸ್ಥೆ ಮಾಡಲಾಗುವುದು. ಮಹನೀಯರ ಜಯಂತಿಗಳನ್ನು ಎಲ್ಲರೂ ಸೇರಿ ಶಾಂತಿಯುತವಾಗಿ ಆಚರಿಸಬೇಕು ಎಂದು ಹೇಳಿದರು.

ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಶಿಂಥೆ, ಹಡಪದ ಅಪ್ಪಣ್ಣ ಸಮಾಜದ ಮುಖಂಡರುಗಳಾದ ದತ್ತಾತ್ರೆಯ ಹಡಪದ, ಗಣೇಶ ಹಡಪದ, ಸಂಗಮೇಶ ಹಡಪದ, ಸುಬಾಸ ಹಡಪದ,ರಾಜಕುಮಾರ ಹಡಪದ,ಸಿದ್ದಪ್ಪಾ ಹಡಪದ, ಶರಣಪ್ಪ ಚಂದನಳ್ಳಿ, ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಹಡಪದ ಅಪ್ಪಣ್ಣ ಸಮಾಜದ ಬಾಂಧವರು ಹಾಗೂ ಇತರರು ಉಪಸ್ಥಿತರಿದ್ದರು.

# ಹೋರಾಟಕ್ಕೆ ಫಲ: ಶುದ್ಧ ಕುಡಿಯುವ ನೀರಿನ ಘಟಕ ದುರಸ್ಥಿ, ಮೂಲಸೌಲಭ್ಯ ಕಲ್ಪಿಸಿದ ಅಧಿಕಾರಿಗಳಿಗೆ ಗ್ರಾಮಸ್ಥರ ಮೆಚ್ಚುಗೆ

**ಯಾದಗಿರಿ:ಜು.23:** ತಾಲ್ಲೂಕಿನ ಹಳಗೇರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಸ್ಕನಹಳ್ಳಿ ಗ್ರಾಮದಲ್ಲಿ ಮೂಲಸೌಲಭ್ಯಗಳ ಕೊರತೆ ಕುರಿತು ನಡೆದ ಹೋರಾಟಕ್ಕೆ ಫಲ ಸಿಕ್ಕಿದ್ದು, ಶುದ್ಧ ಕುಡಿಯುವ ನೀರಿನ ಘಟಕ ದುರಸ್ಥಿ ಸೇರಿದಂತೆ ಹಲವು ಅಗತ್ಯ ಕಾಮಗಾರಿಗಳನ್ನು ಪೂರ್ಣಗೊಳಿಸಿರುವುದಕ್ಕೆ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ.



ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಸಮಸ್ಯೆ, ವಿದ್ಯುತ್ ಹಾಗೂ ಸ್ವಚ್ಛತಾ ವ್ಯವಸ್ಥೆಗಳ ನಿರ್ಲಕ್ಷ್ಯ ಖಂಡಿಸಿ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಾಮಾಜಿಕ ಹೋರಾಟಗಾರ ಉಮೇಶ್ ಕೆ. ಮುದ್ನಾಳ್ ನೇತೃತ್ವದಲ್ಲಿ ತಮಟೆ ಬಾರಿಸುವ ಮೂಲಕ ವಿಶಿಷ್ಟ ರೀತಿಯ ಪ್ರತಿಭಟನೆ ನಡೆಸಲಾಗಿತ್ತು. ಹೋರಾಟದ ಬಳಿಕ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆಸ್ಕಂ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗುತ್ತಿಗೆದಾರರು ಗ್ರಾಮಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಪರಿಶೀಲನೆ ನಂತರ ಸುಮಾರು 1.5 ಲಕ್ಷ ವೆಚ್ಚದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ದುರಸ್ಥಿಗೊಳಿಸಿ, ನೀರಿನ ಮೇಲ್ತೊಟ್ಟಿಯನ್ನು ಸ್ವಚ್ಛಗೊಳಿಸಿ ಸಾರ್ವಜನಿಕ ಬಳಕೆಗೆ ಮುಕ್ತಗೊಳಿಸಲಾಗಿದೆ. ಜೊತೆಗೆ ಸೋರಿಕೆಯಾಗಿದ್ದ ಕುಡಿಯುವ ನೀರಿನ ಪೈಪ್‌ಲೈನ್ ದುರಸ್ಥಿ ಮಾಡಿ, ಗ್ರಾಮದಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಇದಲ್ಲದೆ, ಗ್ರಾಮದ ಚರಂಡಿಗಳನ್ನು ಸ್ವಚ್ಛಗೊಳಿಸಿ ಬ್ಲೀಚಿಂಗ್ ಪೌಡರ್ ಸಿಂಪಡಿಸಲಾಗಿದೆ. ಶಿಥಿಲಗೊಂಡಿದ್ದ ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ ಹೊಸ ಕಂಬಗಳನ್ನು ಅಳವಡಿಸಿದ್ದು, ಬಾಗಿದ್ದ ಕಂಬಗಳನ್ನು ಸರಿಪಡಿಸಲಾಗಿದೆ. ಮನೆಗಳ ಮೇಲಿಂದ ಜೋತುಬಿದ್ದಿದ್ದ ವಿದ್ಯುತ್ ತಂತಿಗಳನ್ನೂ ದುರಸ್ತಿಗೊಳಿಸಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಕಾಮಗಾರಿಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ಗ್ರಾಮಸ್ಥರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆಸ್ಕಂ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿದ್ದು, ಹೋರಾಟಕ್ಕೆ ಸ್ಪಂದಿಸಿ ಸಾರ್ವಜನಿಕರಿಗೆ ಮೂಲಸೌಲಭ್ಯ ಕಲ್ಪಿಸಿರುವುದಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಭೀಮಸೇನರಾವ್, ಭೀಮಾಶಂಕರ, ಪವನ್, ಮಲ್ಲಿಕಾರ್ಜುನ, ರಫೀಕ್, ಯಲ್ಲಪ್ಪ, ಆಂಜನೇಯ, ಖಾಸಿಂ, ಹಣಮಂತ, ಅಲ್ಲಿಸಾಬ್, ಖಾಜಸಾಬ್ ಸೇರಿದಂತೆ ಅನೇಕ ಗ್ರಾಮಸ್ಥರು ಉಪಸ್ಥಿತರಿದ್ದರು.

"ಮಸ್ಕನಹಳ್ಳಿ ಗ್ರಾಮದಲ್ಲಿ ನಡೆಸಿದ ತಮಟೆ ಚಳುವಳಿಗೆ ತಕ್ಷಣ ಸ್ಪಂದಿಸಿ ಶುದ್ಧ ಕುಡಿಯುವ ನೀರು, ವಿದ್ಯುತ್ ಹಾಗೂ ಇತರ ಮೂಲಸೌಲಭ್ಯಗಳ ಸಮಸ್ಯೆಗಳನ್ನು ಪರಿಹರಿಸಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜೆಸ್ಕಂ ಅಧಿಕಾರಿಗಳು, ಸಿಬ್ಬಂದಿ ಹಾಗೂ ಗುತ್ತಿಗೆದಾರರಿಗೆ ಗ್ರಾಮದ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇನೆ."

ಉಮೇಶ್ ಕೆ. ಮುದ್ನಾಳ್, ಸಾಮಾಜಿಕ ಹೋರಾಟಗಾರ

# ಸಂದೀಪ್ ಮಾಶೆಟ್ಟಿಗೆ ಪಿಎಚ್‌ಡಿ



**ಬೀದರ್:** ನಗರದ ಲಿಂಗರಾಜ ಅಪ್ಪ ಎಂಜಿನಿಯರಿಂಗ್ ಕಾಲೇಜಿನ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥ ಸಂದೀಪ್ ಮಾಶೆಟ್ಟಿ ಅವರಿಗೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಪಿಎಚ್‌ಡಿ ನೀಡಿದೆ.

ಡಾ. ಪಿ. ಸಂಪತ್‌ಕುಮಾರನ್ ಮಾರ್ಗದರ್ಶನದಲ್ಲಿ 'ಸವೆತದ ಹಾನಿಗೆ ಒಳಗಾದ ನಿ-ಹಾರ್ಡ್ ಮತ್ತು ಹೆಚ್ಚಿನ ಕ್ರೋಮಿಯಂ ಮಿಶ್ರಲೋಹದ ಕಬ್ಬಿಣಗಳಲ್ಲಿನ ಅವಶೇಷ ಒತ್ತಡದ ಪರಿಣಾಮ' ಕುರಿತು ಅವರು ಮಂಡಿಸಿದ ಪ್ರೌಢ ಪ್ರಬಂಧವನ್ನು ವಿಶ್ವವಿದ್ಯಾಲಯ ಪಿಎಚ್‌ಡಿಗೆ ಮಾನ್ಯ ಮಾಡಿದೆ.

ಸಂದೀಪ್ ಅವರಿಗೆ ಪಿಎಚ್‌ಡಿ ದೊರೆತಿದ್ದಕ್ಕೆ ಅನೇಕರು ಸಂತಸ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿದ್ದಾರೆ.

# ಬರಗಾಲ ಘೋಷಿಸಿ ರೈತರಿಗೆ ತಕ್ಷಣ ಪರಿಹಾರ ನೀಡಿ: ವಿಜಯಕುಮಾರ ಮಾಡ್ಗಿ



**ಚಿಂಚೋಳಿ:ಜು.23:**ಕಲ್ಯಾಣ ಕರ್ನಾಟಕ ಭಾಗದಲ್ಲಿ ಈ ವರ್ಷ ಸಮರ್ಪಕ ಮಳೆಯಾಗದ ಪರಿಣಾಮ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ, ಸಂಪೂರ್ಣ ಕಲಬುರಗಿ ಜಿಲ್ಲೆಯನ್ನು ರಾಜ್ಯ ಸರ್ಕಾರ ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಹಾಗೂ ರೈತರ ಸಲ ಮನ್ನ ಮಾಡಬೇಕಯ ಎಂದು ಬಿಜೆಪಿ ಜಿಲ್ಲಾ ಕಾರ್ಯದರ್ಶಿ ರೈತ ಮೋರ್ಚಾ ಕಲಬುರಗಿ ವಿಜಯಕುಮಾರ ಮಾಡ್ಗಿ ಆಗ್ರಹಿಸಿದ್ದಾರೆ

ಈ ಕುರಿತು ಮಾತನಾಡಿದ ಅವರು, ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಕಾರಣ ಕೃಷಿ ಚಟುವಟಿಕೆಗಳು ಹಿನ್ನಡೆ ಅನುಭವಿಸಿವೆ. ಜಿಲ್ಲೆಯಲ್ಲಿ ಬಿತ್ತನೆಯಾದ ತೊಗರಿ, ಉದ್ದು, ಹೆಸರು, ಸೋಯಬೀನ್ ಸೇರಿದಂತೆ ವಿವಿಧ ಬೆಳೆಗಳು ಸಮರ್ಪಕ ಮಳೆಯ ಕೊರತೆಯಿಂದ ಒಣಗುವ ಹಂತ ತಲುಪಿವೆ. ಅನೇಕ ಗ್ರಾಮಗಳಲ್ಲಿ ಬಿತ್ತನೆ ಕಾರ್ಯ ವಿಳಂಬಗೊಂಡಿದ್ದು, ಈಗಾಗಲೇ ಬಿತ್ತನೆ ಮಾಡಿದ ರೈತರು ಬೆಳೆ ಉಳಿಸಿಕೊಳ್ಳಲು ಪರದಾಡುತ್ತಿದ್ದಾರೆ

ಕಲಬುರಗಿ ಜಿಲ್ಲೆಯ ಚಿಂಚೋಳಿ, ಕಾಳಗಿ, ಸೇಡಂ, ಆಳಂದ, ಅಫಜಲಪುರ, ಜೇವರ್ಗಿ ಸೇರಿದಂತೆ ಬಹುತೇಕ ತಾಲ್ಲೂಕುಗಳಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆ ಸಂಪೂರ್ಣ ಹಿನ್ನಡೆ ಕಂಡಿದೆ. ಬಿತ್ತನೆ ಮಾಡಿದ ಪ್ರಮುಖ ಬೆಳೆಗಳು ಸಮರ್ಪಕ ತೇವಾಂಶದ ಕೊರತೆಯಿಂದ ಬೆಳವಣಿಗೆ ಕಾಣದೆ ಒಣಗುತ್ತಿವೆ. ಮೊದಲ ಮಳೆಯ ನಿರೀಕ್ಷೆಯಲ್ಲಿ ಸಾಲ ಮಾಡಿ ಬೀಜ, ಗೊಬ್ಬರ ಖರೀದಿಸಿ ಬಿತ್ತನೆ ಮಾಡಿದ ರೈತರು ಈಗ ಮತ್ತೆ ಮರುಬಿತ್ತನೆ ಮಾಡುವ ಸ್ಥಿತಿಗೆ ತಲುಪಿದ್ದಾರೆ

ಕೃಷಿ ಉತ್ಪಾದನೆ ಕುಸಿತವಾಗುವ ಭೀತಿ ಎದುರಾಗಿದ್ದು, ಇದರಿಂದ ರೈತರ ಆರ್ಥಿಕ ಸ್ಥಿತಿ ಮತ್ತಷ್ಟು ಹದಗೆಡಲಿದೆ. ಸಹಕಾರಿ ಮತ್ತು ರಾಷ್ಟ್ರೀಕೃತ ಬ್ಯಾಂಕ್ಗಳ ಸಾಲ, ಖಾಸಗಿ ಸಾಲ, ಕೃಷಿ ವೆಚ್ಚದ ಒತ್ತಡದಿಂದ ರೈತರು ಮಾನಸಿಕ ಆತಂಕದಲ್ಲಿದ್ದಾರೆ. ಸರ್ಕಾರ ಪರಿಸ್ಥಿತಿಯ ಗಂಭೀರತೆಯನ್ನು ಅರಿತು ಕೇವಲ ಅಧಿಕಾರಿಗಳ ವರದಿಗಾಗಿ ಕಾಯದೆ ಕೂಡಲೇ ವಿಶೇಷ ತಂಡಗಳನ್ನು ಕಳುಹಿಸಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು.

ಜಲಾಶಯಗಳು, ಕೆರೆ-ಕಟ್ಟೆಗಳು ಮತ್ತು ಅಂತರ್ಜಲ ಮಟ್ಟವೂ ಕುಸಿಯುತ್ತಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುವ ಲಕ್ಷಣಗಳು ಗೋಚರಿಸುತ್ತಿವೆ. ಜಾನುವಾರುಗಳಿಗೆ ಮೇವು ಮತ್ತು ನೀರಿನ ಕೊರತೆ ಆರಂಭವಾಗಿದ್ದು, ಪಶುಸಂಗೋಪನೆ ನಡೆಸುವ ರೈತರು ಕೂಡ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಸರ್ಕಾರ ತಕ್ಷಣ ಕಲಬುರಗಿ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು, ಬೆಳೆ ವಿಮೆ ಪರಿಹಾರವನ್ನು ತ್ವರಿತವಾಗಿ ಬಿಡುಗಡೆ ಮಾಡಬೇಕು, ಸಾಲಮನ್ನಾ ಮಾಡಬೇಕು, ಉಚಿತ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಹಾಗೂ ಮರುಬಿತ್ತನೆಗೆ ಉಚಿತ ಬೀಜ ಮತ್ತು ಅಗತ್ಯ ಕೃಷಿ ಸಾಮಗ್ರಿಗಳನ್ನು ವಿತರಿಸಬೇಕು ಎಂದು ಆಗ್ರಹಿಸಿದ್ದಾರೆ

# ಐದು ದಿನಗಳಿಂದ ಕುಡಿಯುವ ನೀರಿಲ್ಲ: ಚಿಕ್ಕಪೇಟೆ ಜನರ ಗೋಳು ಕೇಳುವವರಿಲ್ಲ:ಕಣ್ಮುಚ್ಚಿ ಕುಳಿತ ಪಾಲಿಕೆ ಅಧಿಕಾರಿಗಳು: ಎಂ.ಪಿ.ಮುದಾಳೆ



**ಬೀದರ:** ಕಳೆದ ಐದು ದಿನಗಳಿಂದ ನಗರದ ಚಿಕ್ಕಪೇಟ ಓಣಿಯಲ್ಲಿ ಕುಡಿಯುವ ನೀರು ಬರುತ್ತಿಲ್ಲ. ಈ ಓಣಿಯ ಜನರ ಗೋಳು ಕೇಳಲು ಅಧಿಕಾರಿಗಳು ತಯ್ಯಾರಿಲ್ಲ. ಸಮಸ್ಯೆ ಹೇಳಿಕೊಳ್ಳಲು ಹೋದರೆ ಒಬ್ಬರ ಮೇಲೊಬ್ಬರು ಹಾಕಿಕೊಂಡು ನಿರ್ಲಕ್ಷ ತೋರುತಿದ್ದಾರೆ ಎಂದು ಓಣಿಯ ಮುಖಂಡರು ಹಾಗೂ ಪತ್ರಕರ್ತರಾದ ಎಂ.ಪಿ.ಮುದಾಳೆ ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು ನೀರಿನ ಸಮಸ್ಯೆ ಬಗೆಹರಿಸಬೇಕೆಂದು ಮಹಾನಗರ ಪಾಲಿಕೆ ಜೆಇ ಸುನೀಲ ಅವರಿಗೆ ಕರೆ ಮಾಡಿದಾಗ ಕಳೆದ ನಾಲ್ಕು ದಿವಸಗಳಿಂದ ರಿಪೇರಿಗಾಗಿ ಕಳುಹಿಸುವೆ ಎಂದು ಸುಳ್ಳು ಹೇಳಿಕೊಂಡು ಕಾಲ ಕಳೆಯುತಿದ್ದಾರೆ. ಗ್ರಾಮಸ್ಥರು ಸಮಸ್ಯೆ ಬಗ್ಗೆ ಹೇಳಿಕೊಳ್ಳಲು ಕರೆ ಮಾಡಿದರೆ ಕಾಲ್ ರಿಕಾರ್ಡಿಂಗ್ ಮಾಡಿಕೊಂಡು ಜನರಿಗೆ ಹೆದರಿಸುವ ಕೆಲಸ ಮಾಡುತಿದ್ದಾರೆ. ಆದ್ದರಿಂದ ಕೂಡಲೇ ಅವರಿಗೆ ವರ್ಗಾವಣೆ ಮಾಡಬೇಕೆಂದು ಮುದಾಳೆ ಆಗ್ರಹಿಸಿದ್ದಾರೆ. ಕಳಪೆ ಕಾಮಗಾರಿಯಿಂದ ಮತ್ತು ವಿದ್ಯುತ್ ತಂತಿ ಸುಟ್ಟ ಕಾರಣ ಮೋಟಾರು ಬಂದ್ ಆಗಿ ನೀರಿನ ಸಮಸ್ಯೆ ಉಂಟಾಗಿದೆ. ಅದನ್ನು ರಿಪೇರಿ ಮಾಡಿಸುವ ಗೋಜಿಗೂ ಅಧಿಕಾರಿಗಳು ಹೋಗಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಸಭೆಯಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ನೋಡಿಕೊಳ್ಳಿ ಎಂದು ಹೇಳುತ್ತಾರೆ. ಆದರೆ ಅಧಿಕಾರಿಗಳು ನಮ್ಮ ಮನವಿಗೆ ಕವಡೆ ಕಾಸಿನ ಕಿಮ್ಮತ್ತು ಕೊಡದೆ ಲಂಗು ಲಗಾಮಿಲ್ಲದೆ ನಿರ್ಲಕ್ಷ ತೋರುತ್ತಿರುವುದು ದುರಂತ. ಇಂತಹ ಮಳೆಗಾಲದಲ್ಲೂ ಚಿಕ್ಕಪೇಟ್ ಓಣಿಯಲ್ಲಿ ನೀರಿನ ಸಮಸ್ಯೆಯಿದೆ ಎಂದು ಹೇಳಿಕೊಳ್ಳಲು ನಮಗೆ ನಾಚಿಕೆಯಾಗುತ್ತಿದೆ ಎಂದು ಮುದಾಳೆ ದೂರಿದ್ದಾರೆ.

ಚಿಕ್ಕಪೇಟೆ ಗ್ರಾಮದಲ್ಲಿ ವಿದ್ಯುತ್ ದೀಪಗಳಿಲ್ಲ. ಓಣಿಯೆಲ್ಲ ಕತ್ತಲೆಯಿಂದ ತುಂಬಿದೆ. ಓಡಾಡಲು ಸರಿಯಾದ ರಸ್ತೆಗಳಿಲ್ಲ. ಜನರು ಕತ್ತಲೆಯಲ್ಲಿ ಬಿದ್ದು ಕೈಕಾಲುಗಳಿಗೆ ಗಾಯ ಮಾಡಿಕೊಳ್ಳುತ್ತಿದ್ದಾರೆ. ಮಳೆಗಾಲ ಇರುವ ಕಾರಣ ಕಾಲುವೆಗಳು ತುಂಬಿ ಹೊಲಸು ನೀರು ರಸ್ತೆ ಮೇಲೆ ನಿಲ್ಲುತ್ತಿವೆ. ಗಬ್ಬು ನಾರುತ್ತಿರುವ ಕಾರಣ ಸಾರ್ವಜನಿಕರು ಮೂಗು ಮುಚ್ಚಿಕೊಂಡು ಓಡಾಡುವ ದುಸ್ಥಿತಿ ಬಂದಿದೆ. ಚಿಕ್ಕಪೇಟ್ ರಿಂಗ್ ರಸ್ತೆಯಲ್ಲಿ ಡಿವೈಡರ್‌ಗಳಿಲ್ಲ. ಕಾರಣ ಅಪಘಾತಗಳು ಸಂಭವಿಸುತ್ತಿವೆ. ಜನರ ಜೀವಕ್ಕೆ ಹೊಣೆಯಾರು? ಎಂದು ಅಧಿಕಾರಿಗಳಿಗೆ ಹಾಗೂ ಜನಪ್ರತಿನಿಧಿಗಳಿಗೆ ಎಂ.ಪಿ.ಮುದಾಳೆ ಪ್ರಶ್ನೆ ಮಾಡಿದ್ದಾರೆ.

# ರಾಜ್ಯಮಟ್ಟದ ಮುಕ್ತ ಕರಾಟೆ ಚಾಂಪಿಯನ್‌ಶಿಪ್ ಸ್ಪರ್ಧೆ




**ನವಲಗುಂದ,ಜು23 :** ಪಟ್ಟಣದಲ್ಲಿ ಪ್ರಪ್ರಥಮ ಬಾರಿಗೆ ಆಯೋಜಿಸಲಾದ ರಾಜ್ಯಮಟ್ಟದ ಮುಕ್ತ ಕರಾಟೆ ಚಾಂಪಿಯನ್‌ಷಿಪ್ ಇಲ್ಲಿನ ಶ್ರೀ ಹುರಕಡ್ಲಿ ಅಜ್ಜ ಕಲ್ಯಾಣ ಮಂಟಪದಲ್ಲಿ ಯಶಸ್ವಿಯಾಗಿ ನಡೆಯಿತು.

ಶೋಟೋಕಾನ್ ಕರಾಟೆ ಆಫ್ ಇಂಡಿಯಾ ಸಹಯೋಗದಲ್ಲಿ ಪ್ರೀಮಿಯರ್ ಶೋಟೋಕಾನ್ ಸ್ಪೋರ್ಟ್ಸ್ ಕರಾಟೆ ಅಕಾಡೆಮಿ ವತಿಯಿಂದ, ಸಂಸ್ಥೆಯ ಮುಖ್ಯಸ್ಥ ಶಿಹಾನ್ ರಾಜಶೇಖರ ಭೂಸನೂರಮಠ ಅವರ ನೇತೃತ್ವದಲ್ಲಿ ಈ ಚಾಂಪಿಯನ್‌ಷಿಪ್ ಆಯೋಜಿಸಲಾಗಿತ್ತು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸುಮಾರು 500ಕ್ಕೂ ಅಧಿಕ ಕರಾಟೆ ಪಟುಗಳು ವಿವಿಧ ವಯೋಮಾನದ ಕಟಾ ಹಾಗೂ ಕುಮಿತೆ ವಿಭಾಗಗಳಲ್ಲಿ ಭಾಗವಹಿಸಿ ತಮ್ಮ ಕೌಶಲ್ಯವನ್ನು ಪ್ರದರ್ಶಿಸಿದರು. ದಿನವಿಡೀ ನಡೆದ ಸ್ಪರ್ಧೆಗಳು ಕ್ರೀಡಾಸ್ಫೂರ್ತಿ, ಶಿಸ್ತು ಮತ್ತು ಉತ್ಸಾಹದ ವಾತಾವರಣಕ್ಕೆ ಸಾಕ್ಷಿಯಾದವು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಧಾರವಾಡ ಜಿಲ್ಲಾ ಕರಾಟೆ ಅಸೋಸಿಯೇಷನ್ ಅಧ್ಯಕ್ಷ ಶಿಹಾನ್ ಶ್ರೀಕಾಂತ ಮಲ್ಲೂರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ನವಲಗುಂದ ವೃತ್ತದ ಸಿ.ಪಿ.ಐ. ರವಿಕುಮಾರ್ ಕಪ್ಪತ್ತನವರ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ನವಲಗುಂದ ಘಟಕದ ಅಧ್ಯಕ್ಷ ಎ. ಬಿ. ಕೊಪ್ಪದ, ಹಾಗೂ ಏಷ್ಯನ್ ರೆಫರಿ ಮತ್ತು ಟೆಕ್ನಿಕಲ್ ಡೈರೆಕ್ಟರ್ ಹನಸಿ ಅನ್ನಪ್ಪ ಮಾಕಲ್ ಭಾಗವಹಿಸಿ, ಕರಾಟೆ ಕೇವಲ ಆತ್ಮರಕ್ಷಣೆಯ ಕಲೆ ಮಾತ್ರವಲ್ಲ; ಶಿಸ್ತು, ಆತ್ಮವಿಶ್ವಾಸ ಮತ್ತು ವ್ಯಕ್ತಿತ್ವ ವಿಕಸನದ ಮಾಧ್ಯಮವೂ ಆಗಿದೆ ಎಂದು ಅಭಿಪ್ರಾಯಪಟ್ಟರು.

ವಿಶೇಷ ಅತಿಥಿಗಳಾಗಿ ಪ್ರೀಮಿಯರ್ ಶೋಟೋಕಾನ್ ಸ್ಪೋರ್ಟ್ಸ್ ಕರಾಟೆ ಅಕಾಡೆಮಿಯ ಅಧ್ಯಕ್ಷ ಶಿಹಾನ್ ಗಂಗಾಧರ ಕಂಡಾರೆ, ಉಪಾಧ್ಯಕ್ಷ ಶಿಹಾನ್ ಸುರೇಂದ್ರ ಎನ್. ಎಸ್., ಹುಬ್ಬಳ್ಳಿಯ ಕರಾಟೆ ತರಬೇತುದಾರರಾದ ಶಿಹಾನ್ ಮೌಲಾಲಿ ಬನಹಟ್ಟಿ, ಶಿಹಾನ್ ವಿಜಯ್ ಮೇತ್ರಿ, ಶರತ್, ಗಣೇಶ್, ಸಿದ್ದು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ನವಲಗುಂದದಲ್ಲಿ ಮೊದಲ ಬಾರಿಗೆ ಇಂತಹ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯನ್ನು ಯಶಸ್ವಿಯಾಗಿ ಆಯೋಜಿಸಿರುವುದು ಸ್ಥಳೀಯ ಕ್ರೀಡಾ ವಲಯದಲ್ಲಿ ಹೊಸ ಚೈತನ್ಯ ಮೂಡಿಸಿದ್ದು, ಯುವ ಪ್ರತಿಭೆಗಳಿಗೆ ಉತ್ತಮ ವೇದಿಕೆ ಕಲ್ಪಿಸಿದಂತಾಗಿದೆ ಎಂದು ಸಾರ್ವಜನಿಕರು ಪ್ರಶಂಸಿಸಿದರು. ಕಾರ್ಯಕ್ರಮವನ್ನು ಶಿಕ್ಷಕ ಗಣೇಶ ಹೊಳೆಯಣ್ಣವರ ನಿರೂಪಿಸಿದರು.

# ಬೈಕ್ ಗಳ ನಡುವೆ ಡಿಕ್ಕಿ : ಓರ್ವ ಸಾವು, ಮತ್ತಿಬ್ಬರಿಗೆ ಗಾಯ.




**ಕೂಡ್ಲಿಗಿ. ಜು. 23 :-** ಅವರವರ ವೈಯಕ್ತಿಕ ಕೆಲಸಗಳನ್ನು ಮುಗಿಸಿಕೊಂಡು ಹೊರಟಿದ್ದವರ ಬೈಕ್ ಗಳ ನಡುವೆಯಾಗಿರುವ ಅಪಘಾತದಿಂದ ಓರ್ವ ಗಾಯಳು ಮೊಳಕಾಲ್ಮುರ್ ಆಸ್ಪತ್ರೆಗೆ ಕರೆದೋಯ್ಯುವ ಮಾರ್ಗಮಧ್ಯೆ ಮೃತಪಟ್ಟಿದ್ದು, ಮತ್ತಿಬ್ಬರು ಗಾಯಗಳಾಗಿ ಚಿಕಿತ್ಸೆ ಪಡೆಯುತ್ತಿರುವ ಘಟನೆ ಬುಧವಾರ ಸಂಜೆ ತಾಲೂಕಿನ ಗುಡೇಕೋಟೆ ಸಮೀಪದ ಗುಡೇಕೋಟೆ  ಮೊಳಕಾಲ್ಮುರು ರಸ್ತೆಯಲ್ಲಿ ಬರುವ ದುರುಗಮ್ಮ ದೇವಸ್ಥಾನ ಹತ್ತಿರದ ಜರುಗಿದೆ.

ಆಂಧ್ರಪ್ರದೇಶ ಸಾರಿಗೆ ಸಂಸ್ಥೆಯ ಬಸ್ ಚಾಲಕ ರಾಯದುರ್ಗ ಕರಿಬಸಪ್ಪ (48) ತೀವ್ರಗಾಯವಾಗಿದ್ದರಿಂದ ಮೊಳಕಾಲ್ಮುರು ಆಸ್ಪತ್ರೆಗೆ ಕರೆದೋಯ್ಯುವಾಗ ಮಾರ್ಗ ಮದ್ಯೆ ಮೃತ ಪಟ್ಟ ದುರ್ದೈವಿ ಹಾಗೂ ಅಪಘಾತಕ್ಕೆ ಕಾರಣನಾದ ಆರೋಪಿ ಎಂದು ಹೇಳಲಾಗಿದ್ದು.ಮತ್ತೊಂದು ಬೈಕಿನ ಇನ್ನಿಬ್ಬರಾದ ಮೊಳಕಾಲ್ಮುರು ಪಟ್ಟಣದ ಮುಜಾಮಿಲ್ ಬೇಗ್ (65) ಹಾಗೂ ಮಹಮ್ಮದ್ ಖಲೀಲ್ ಉಲ್ಲಾ (43) ಗಾಯಗೊಂಡು ಮೊಳಕಾಲ್ಮುರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರಾಗಿದ್ದಾರೆ.

ಘಟನೆ ವಿವರ : ಮೊಳಕಾಲ್ಮುರಿನಿಂದ ಕೂಡ್ಲಿಗಿಗೆ ಬಂದು ಸ್ವಗ್ರಾಮಕ್ಕೆ ಸಂಜೆ 4 ಗಂಟೆ ಸುಮಾರಿಗೆ ಚೆಕ್ಕೆಬಂಡೆ ಹತ್ತಿರ ದುರಗಮ್ಮ ದೇವಸ್ಥಾನದ ಸಮೀಪದ ರಸ್ತೆಯಲ್ಲಿ ಬೈಕಿನಲ್ಲಿ ಇಬ್ಬರು ತೆರಳುವಾಗ ಎದುರಿಗೆ ಬಂದ ಬೈಕ್ ಸವಾರ ಕರಿಬಸಪ್ಪನು ಅತಿವೇಗವಾಗಿ ಬಂದು ನಮ್ಮ ಬೈಕಿಗೆ ಮುಖಾಮುಖಿ ಡಿಕ್ಕಿಹೊಡೆಸಿದ್ದರಿಂದ ಮೂವರಿಗೂ ತೀವ್ರ ಗಾಯಗಳಾಗಿದ್ದು ತಕ್ಷಣ ಮೊಳಕಾಲ್ಮುರು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು ಕರಿಬಸಪ್ಪ ಮಾರ್ಗ ಮಧ್ಯೆ ಮೃತಪಟ್ಟಿದ್ದು, ಇನ್ನಿಬ್ಬರು ಚಿಕಿತ್ಸೆ ಪಡೆದುಕೊಂಡಿರುವುದಾಗಿ ಗಾಯಳು ಮುಜಾಮಿಲ್ ಬೇಗ್ ನೀಡಿದ ದೂರಿನಂತೆ ಇಂದು ನಸುಕಿನ ಜಾವ ಗುಡೇಕೋಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬರದ ಭೀತಿ ಎದುರಿಸಲು ಸರ್ಕಾರದಿಂದ ಬೃಹತ್ ಮುನ್ನೆಚ್ಚರಿಕೆ ಕಾರ್ಯತಂತ್ರ



**ಬೆಂಗಳೂರು, ಜು. 23 :**ಜಾಗತಿಕ ಮಟ್ಟದಲ್ಲಿ ತೀವ್ರಗೊಳ್ಳುತ್ತಿರುವ 'ಎಲ್ ನಿನೋ' ಹವಾಮಾನ ವೈಪರೀತ್ಯದ ಪರಿಣಾಮವಾಗಿ ಉಂಟಾಗಬಹುದಾದ ತಾಪಮಾನ ಏರಿಕೆ ಹಾಗೂ ಬರದ ಪರಿಸ್ಥಿತಿಯನ್ನು ಎದುರಿಸಲು ಕರ್ನಾಟಕ ಸರ್ಕಾರವು ಸಮಗ್ರ ಮತ್ತು ದೂರದೃಷ್ಟಿಯ ಕಾರ್ಯತಂತ್ರವನ್ನು ಕೈಗೆತ್ತಿಕೊಂಡಿದೆ.

ದಕ್ಷಿಣ ಪೆಸಿಫಿಕ್ ಮಹಾಸಾಗರದ ಕೇಂದ್ರ ಮತ್ತು ಪೂರ್ವ ಭಾಗಗಳಲ್ಲಿ ಸಮುದ್ರದ ಮೇಲ್ಮೈ ನೀರು ಸಾಮಾನ್ಯಕ್ಕಿಂತ ಹೆಚ್ಚು ಕಾಯುವ ವಿದ್ಯಮಾನವನ್ನು 'ಎಲ್ ನಿನೋ' (ಸ್ಪ್ಯಾನಿಷ್ ಭಾಷೆಯಲ್ಲಿ 'ಪುಟ್ಟ ಬಾಲಕ' ಅಥವಾ 'ಯೇಸು ಕ್ರಿಸ್ತ') ಎನ್ನಲಾಗುತ್ತದೆ.

ಈ ಘಟನೆಯು ಜಾಗತಿಕ ಗಾಳಿಯ ಮಾದರಿ ಹಾಗೂ ಮಳೆಯ ಪ್ರಮಾಣವನ್ನು ಏರುಪೇರು ಮಾಡುತ್ತದೆ. ಕಳೆದ 150 ವರ್ಷಗಳಲ್ಲೇ ಅತ್ಯಂತ ಪ್ರಬಲ ಎಲ್ ನಿನೋ ಆವರಿಸುವ ಸಾಧ್ಯತೆಯಿದೆ ಎಂದು ತಜ್ಞರು ಎಚ್ಚರಿಸಿದ್ದಾರೆ.

ಇದರ ಪರಿಣಾಮವಾಗಿ ಭಾರತದಲ್ಲಿ, ವಿಶೇಷವಾಗಿ ಕರ್ನಾಟಕದಲ್ಲಿ ನೈಋತ್ಯ ಮುಂಗಾರು ಮಳೆ ಕ್ಷೀಣಿಸಿ ಬರದ ಛಾಯೆ ಮೂಡುವ ಭೀತಿ ಎದುರಾಗಿದೆ.

**ತಾಪಮಾನ ಏರಿಕೆ ಮತ್ತು ಬರದ ಮುನ್ನೆಚ್ಚರಿಕೆ :** ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರ ನೀಡಿದ ಸೂಚನೆಯಂತೆ, ಈ ಹವಾಮಾನ ವೈಪರೀತ್ಯವು 2027ರ ಮೇ ತಿಂಗಳವರೆಗೆ ಮುಂದುವರಿಯುವ ಸಾಧ್ಯತೆಯಿದೆ.ಸಾಮಾನ್ಯ ತಾಪಮಾನಕ್ಕಿಂತ ಹೆಚ್ಚು ಉಷ್ಣಾಂಶ ದಾಖಲಾಗಲಿದ್ದು, ತೀವ್ರ ಕಾವು ಉಂಟಾಗಲಿದೆ. ಮುಂಗಾರು ವೈಫಲ್ಯ ಹಾಗೂ ಜಲಕ್ಷಾಮ, ಮಳೆಯ ಕೊರತೆಯಿಂದ ಜಲಾಶಯಗಳ ಮಟ್ಟ ಕುಸಿದು, ಕೃಷಿ ಹಾಗೂ ಕುಡಿಯುವ ನೀರಿಗೆ ಅಭಾವ ತಲೆದೋರಬಹುದು.

ಕೃಷಿ ಉತ್ಪಾದನೆ ಕುಸಿದು ಆಹಾರ ಧಾನ್ಯಗಳ ಬೆಲೆ ಏರಿಕೆಯಾಗುವ ಸಾಧ್ಯತೆಯಿದೆ.

**ಸರ್ಕಾರದ ಪ್ರಮುಖ ರಕ್ಷಣಾತ್ಮಕ ಕ್ರಮಗಳು ಹಾಗೂ ಕಾರ್ಯಕ್ರಮಗಳು:** ಬೋರ್‌ವೆಲ್ ಮರುಪೂರಣ ಮತ್ತು ಅಂತರ್ಜಲ ರಕ್ಷಣೆ, ಕೆ ಜಿ ಐ ಎಸ್ ಡಿಜಿಟಲ್ ನೋಂದಣಿ, ರಾಜ್ಯದಲ್ಲಿರುವ ಸುಮಾರು 37 ಲಕ್ಷ ಬೋರ್‌ವೆಲ್‌ಗಳ ಸಮಗ್ರ ಮಾಹಿತಿಯನ್ನು ಏಖಖಖಂಅನ ಏ-ಉಖಖ ಪೋರ್ಟಲ್‌ನಲ್ಲಿ ದಾಖಲಿಸಲಾಗುತ್ತಿದೆ.

**ತಾಂತ್ರಿಕ ತರಬೇತಿ ಹಾಗೂ ಪ್ರಗತಿ ಪರಿಶೀಲನೆ :** ಬೋರ್‌ವೆಲ್‌ಗಳ ತಾಂತ್ರಿಕ ಪರಿಶೀಲನೆ, ರಿಪೇರಿ ಮತ್ತು ಮರುಪೂರಣ ಕಾರ್ಯಗಳಿಗಾಗಿ ವಿಶೇಷ ತರಬೇತಿ ನೀಡಲಾಗುತ್ತಿದ್ದು, ಪ್ರತಿ 15 ದಿನಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಲಾಗುತ್ತದೆ.

ತೀವ್ರವಾಗಿ ಅಂತರ್ಜಲ ಕುಸಿದಿರುವ ಪ್ರದೇಶಗಳಲ್ಲಿ (ಅತಿ ಹೆಚ್ಚು ಬಳಕೆಯಾದ ವಲಯಗಳಲ್ಲಿ) ಹೊಸ ಬೋರ್‌ವೆಲ್ ಕೊರೆಯುವುದನ್ನು ನಿರ್ಬಂಧಿಸಲಾಗಿದೆ.

**ಜಲ ಸಂರಕ್ಷಣೆ ಮತ್ತು ಮೂಲಸೌಕರ್ಯ ಅಭಿವೃದ್ಧಿ :** ವಿಬಿಜಿರಾಮ್ ಜಿ ಯೋಜನೆ: ಗ್ರಾಮೀಣ ಪ್ರದೇಶಗಳಲ್ಲಿ ಮಳೆನೀರು ಸಂಗ್ರಹಣೆ, ವಿವಿಧ ಚೆಕ್ ಡ್ಯಾಮ್‌ಗಳ ನಿರ್ಮಾಣ (ಮಣ್ಣಿನ ತಡೆ, ಕಲ್ಲು ತುಂಬಿದ ತಂತಿ ಜಾಲದ ತಡೆ, ಕಲ್ಲಿನ ತಡೆ ಹಾಗೂ ಸಾಂಪ್ರದಾಯಿಕ ನೀರಿನ ಮೂಲಗಳ ಪುನರುಜ್ಜೀವನವನ್ನು ಕೈಗೆತ್ತಿಕೊಳ್ಳಲಾಗಿದೆ.

**ಕಲುಷಿತ ನೀರು ಮರುಬಳಕೆ :** ಸಂಸ್ಕರಿಸಿದ ತ್ಯಾಜ್ಯ ನೀರನ್ನು ಕೈಗಾರಿಕೆ, ಉದ್ಯಾನವನ ಹಾಗೂ ನಿರ್ಮಾಣ ಕಾಮಗಾರಿಗಳಿಗೆ ಬಳಸುವ ವ್ಯವಸ್ಥೆ ಮಾಡಲಾಗುತ್ತಿದೆ.

**ವಾಟರ್ ಬಜೆಟಿಂಗ್ :** ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ನೀರಿನ ಸರಿಯಾದ ನಿರ್ವಹಣೆಗಾಗಿ 'ಜಲ ಆಯವ್ಯಯ' ಜಾರಿಗೆ ತರಲಾಗುತ್ತಿದೆ.

**ರೈತರಿಗೆ ಆಸರೆ: ಬರನಿರೋಧಕ ಬೆಳೆಗಳ ಪ್ರೋತ್ಸಾಹ :** ಮಳೆ ಅಭಾವದಿಂದ ಉಂಟಾಗುವ ನಷ್ಟ ತಪ್ಪಿಸಲು ರೈತರು ಕಡಿಮೆ ನೀರು ಬಳಸುವ ಮತ್ತು ತೀವ್ರ ಶಾಖವನ್ನು ತಡೆಯಬಲ್ಲ ಬೆಳೆಗಳನ್ನು ಬೆಳೆಯಲು ಸರ್ಕಾರ ಉತ್ತೇಜಿಸುತ್ತಿದೆ.

**ಸಿರಿಧಾನ್ಯಗಳು :** ಶೇಂಗಾ, ಜೋಳ, ರಾಗಿ ಇತ್ಯಾದಿ, ಕೇವಲ 250-400 ಮಿ.ಮೀ. ಮಳೆಯಲ್ಲೇ ಬೆಳೆಯಬಹುದು.

**ದ್ವಿದಳ ಧಾನ್ಯಗಳು :** ಕಡಲೆ, ತೊಗರಿ, ಅಲಸಂದಿ ಮುಂತಾದ ಬೆಳೆಗಳು. ಇವುಗಳ ಬೇರುಗಳು ಆಳಕ್ಕೆ ಇಳಿದು ತೇವಾಂಶ ಪಡೆಯುತ್ತವೆ ಹಾಗೂ ಮಣ್ಣಿನ ಸಾರ ಹೆಚ್ಚಿಸುತ್ತವೆ.

**ಎಣ್ಣೆಕಾಳುಗಳು :** ಸೂರ್ಯಕಾಂತಿ, ಎಳ್ಳು ಮತ್ತು ಹುಚ್ಚೆಳ್ಳು ಇತ್ಯಾದಿ. 400-750 ಮಿ.ಮೀ. ಮಳೆಯ ಅಗತ್ಯವಿದ್ದು, ಒಣ ಹವಾಮಾನ ತಡೆಯಬಲ್ಲವು.

ಹವಾಮಾನ ವೈಪರೀತ್ಯದ ಈ ಕಠಿಣ ಪರಿಸ್ಥಿತಿಯನ್ನು ಯಶಸ್ವಿಯಾಗಿ ಎದುರಿಸಲು ಪ್ರತಿಯೊಬ್ಬ ನಾಗರಿಕರೂ ಇಂಧನ ಬಳಕೆಯನ್ನು ಮಿತಿಗೊಳಿಸಬೇಕು, ಪುನರ್ಬಳಕೆ ಮಾಡಬಹುದಾದ ಇಂಧನ ಮೂಲಗಳಿಗೆ ಆದ್ಯತೆ ನೀಡಬೇಕು ಮತ್ತು ನೀರನ್ನು ಅತ್ಯಂತ ಮಿತವಾಗಿ ಬಳಸಿ ಸಂರಕ್ಷಿಸಬೇಕು. ಸರ್ಕಾರದ ಈ ಬೃಹತ್ ಜಲ ಸಂರಕ್ಷಣಾ ಅಭಿಯಾನಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಕರೆ ನೀಡಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE